ಸಂಪುಟ : 10 ಸಂಚಿಕೆ: 78 ಪುಟ : 4+2 ಬೆಲೆ: 3.00 ಶುಕ್ರವಾರ ಎಪ್ರಿಲ್ 25 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 78 Pages : 4+2 Price : 3.00 Friday April 25 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಶಾಲಾ-ಕಾಲೇಜುಗಳ ಮುಖ್ಯಸ್ಥರಲ್ಲಿ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ


ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಸುವರ್ಣ ಮಹೋತ್ಸವ (19-5-2025)ದ ಅಂಗವಾಗಿ ಸ್ಮರಣ ಸಂಚಿಕೆ ಪ್ರಕಟಿಸುವ ಯೋಜನೆ ಇದೆ. ಇದೊಂದು ವಿಶೇಷ ಸಂಚಿಕೆಯಾಗಿದ್ದು, ಕೇವಲ ಸಮಾಜಮುಖಿ ಸೇವಾ ಕಾರ್ಯಗಳ ವಿಷಯ ಪ್ರಕಟಗೊಳಿಸಲಾಗುವುದು.

ರಾಷ್ಟ್ರ ನಿರ್ಮಾಣಕ್ಕೆ ಪೂರಕವಾದ ಈ ಕಾರ್ಯದ ಯಶಸ್ವಿಗಾಗಿ ಮತ್ತು ಯೋಗ ಪ್ರಸಾರ ಸೇವೆ ವಿಸ್ತರಣೆಗಾಗಿ ಸಹಕರಿಸುವ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯಲ್ಲಿನ ಯೋಗ ಸಂಘ-ಸಂಸ್ಥೆ, ಶಾಲಾ-ಕಾಲೇಜುಗಳ ಮುಖ್ಯಸ್ಥರು ತಮ್ಮ ಸಂಸ್ಥೆಯ ಹೆಸರು ಮತ್ತು ಸಂಸ್ಥೆ ನಡೆಸುವ ಯೋಗದ ಪ್ರಮುಖ ಕಾರ್ಯ ಚಟುವಟಿಕೆಗಳ ವಿವರಗಳನ್ನು ಎಪ್ರಿಲ್ 30ರೊಳಗೆ ತಲುಪಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವ ಸೇವಾ ಸಮಿತಿ, ಸ್ಮರಣ ಸಂಚಿಕೆ ವಿಭಾಗ, ಬಸವ ಯೋಗ ಮಹಾವಿದ್ಯಾಲಯ, ಸಿದ್ಧಲಿಂಗ ನಗರ, ಗದಗ-582103 ದೂರವಾಣಿ ಸಂಖ್ಯೆ 9448317188, ಈ-ಮೇಲ್ : kspyoga01@gmail.com ವಿಳಾಸ ಮೂಲಕ ತಲುಪಿಸಲು ಸ್ಮರಣ ಸಂಚಿಕೆ ಸಮಿತಿ ಪದಾಧಿಕಾರಿ ಹಾಗೂ ಸದಸ್ಯರ ಪರವಾಗಿ ಯೋಗಾಚಾರ್ಯ ಕೆ.ಎಸ್. ಪಲ್ಲೇದ ಪತ್ರಿಕಾ ಪ್ರಕಟಣೆ ಮೂಲಕ ವಿನಂತಿಸಿದ್ದಾರೆ.

## ಅಮಾಯಕರ ಮೇಲಿನ ಹಲ್ಲೆಯನ್ನು ಒಪ್ಪಲಾಗದು

■ ವಿಜಯಸಾಕ್ಷಿ ಸುದ್ದಿ, ಗದಗ



ಜಮ್ಮು ಮತ್ತು ಕಾಶ್ಮೀರದ ಅನಂತನಾಗ್ ಜಿಲ್ಲೆಯಲ್ಲಿ ಅಮಾಯಕರ ಮೇಲೆ ನಡೆದ ಗುಂಡಿನ ದಾಳಿ ಸಮಸ್ತ ಮಾನವ ಕುಲದ ಮೇಲೆ ಮಾಡಿದ ದಾಳಿಯಾಗಿದೆ ಎಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ರಾಜ್ಯಾಧ್ಯಕ್ಷ ಮಹ್ಮದಶಫಿ ಎಸ್.ನಾಗರಕಟ್ಟಿ ಖಂಡಿಸಿದ್ದಾರೆ.

ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಕೇಂದ್ರ ಕಚೇರಿಯಲ್ಲಿ ನಡೆದ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದ ಅವರು, ಉಗ್ರರು ಇಂತಹ ದಾಳಿಯಿಂದ ಭಾರತವನ್ನು ಮಣಿಸಬಹುದೆಂದು ಭಾವಿಸಿದ್ದರೆ ಅದು ಅವರ ಮೂರ್ಖತನ. ದೇಶದ ಐಕ್ಯತೆಗೆ ಸಂಬಂಧಿಸಿದ ವಿಷಯ ಬಂದಾಗ ಭಾರತೀಯರು ಯಾವುದೇ ಧರ್ಮವನ್ನು ನೋಡುವುದಿಲ್ಲ. ಅಮಾಯಕರ ಮೇಲೆ ಹಲ್ಲೆ ಮಾಡುವುದನ್ನು ಯಾವ ಧರ್ಮವೂ ಒಪ್ಪಿಕೊಳ್ಳುವುದಿಲ್ಲ.

ಇಂತಹ ಕೃತ್ಯವನ್ನು ಧರ್ಮದ ಹೆಸರಿನಲ್ಲಿ ಮಾಡುವುದನ್ನು ಮುಸ್ಲಿಂ ಸಮಾಜವು ಎಂದೂ ಒಪ್ಪಿಕೊಳ್ಳುವುದಿಲ್ಲ. ಭಾರತ ಸರಕಾರವು ತಕ್ಷಣ ಇವರ ವಿರುದ್ಧ ಕಠಿಣ ಕ್ರಮವನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಅಧ್ಯಕ್ಷರಾದ ಎಂ.ಡಿ. ಜಾಫರ್ ಡಾಲಾಯತ, ಬಿಜಾಪುರ ಜಿಲ್ಲಾ ಅಧ್ಯಕ್ಷ ತಯ್ಯೆಬ ಅಥಣಿ, ಮುನ್ನ ಕಲ್ಮನಿ, ಎಂ.ಐ. ಮುಲ್ಲಾ, ರಫೀಕ್ ಮುಲ್ಲಾನವರ, ಎಂ.ಎಂ. ಶಿರಹಟ್ಟಿ, ಜಿಲ್ಲಾ ಯುವ ಘಟಕದ ಯಾಸಿನ್ ಎ.ಮುಲ್ಲಾ, ಅಫ್ಜಲ್ ಮನಿಯಾರ, ಯಾಸಿನ್ ಮುಲ್ಲಾದರವೇಶ್, ಮೊಹಮ್ಮದ ಯೂಸುಫ್, ಯಾಸಿನ್ ಖವಾಸ್ ಮುಂತಾದವರಿದ್ದರು.

### ವರನಟ ಡಾ.ರಾಜಕುಮಾರರ 97ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಡಾ. ರಾಜಕುಮಾರ್ ಕನ್ನಡ ಸಂಸ್ಕೃತಿಯ ಪ್ರತೀಕ

■ ವಿಜಯಸಾಕ್ಷಿ ಸುದ್ದಿ, ಗದಗ






ನಮ್ಮ ಸಂಸ್ಕೃತಿ, ನಮ್ಮತನವನ್ನು ಬೆಳೆಸುವ ದಿಟ್ಟತನ ಹೊಂದಿದ್ದ ಡಾ. ರಾಜಕುಮಾರ ಅವರು ಕಲೆಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದರು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಂಯುಕ್ತಾಶ್ರಯದಲ್ಲಿ ವರನಟ ಡಾ. ರಾಜಕುಮಾರ್ ಅವರ 97ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುತ್ತುರಾಜ್ ರಾಜಕುಮಾರ ಆಗಿ ಬದಲಾಗಿದ್ದು ಒಂದು ರೋಚಕ. ರಾಜ್ ಎಂಬುದು ಸಂಸ್ಕೃತಿಯ ಪ್ರತೀಕ. ಅಂದಿನ ಕಾಲದಲ್ಲೇ ಒಂದರ ಹಿಂದೆ ಒಂದರಂತೆ ಹಿಟ್ ಚಿತ್ರಗಳನ್ನು ಕೊಟ್ಟು ಅಭಿಮಾನಿಗಳ ಮನದಲ್ಲಿ ನೆಲೆಸಿದ್ದರು. ಅಭಿಮಾನಿಗಳೇ ದೇವರು ಎಂಬ ಪದವನ್ನು ಹುಟ್ಟುಹಾಕಿದವರೇ ಡಾ. ರಾಜಕುಮಾರ ಎಂದು ಹೇಳಿದರು.

> ಹುಬ್ಬಳ್ಳಿಯ ಚಲನಚಿತ್ರ ನಿರ್ದೇಶಕ ಹಾಗೂ ನಟ ದಿಲೀಪ್ ಶರ್ಮಾ ಉಪನ್ಯಾಸ ನೀಡಿ, ವ್ಯಕ್ತಿ, ಶಕ್ತಿ ಜೊತೆಗೆ ಡಾ. ರಾಜಕುಮಾರ ಮಗುವಾಗಿ ಇರುತ್ತಿದ್ದರು. ಅಭಿಮಾನಿಗಳೇ ನನ್ನ ದೇವರು ಎಂದು ಮನಸಾರೆ ಹೇಳುತ್ತಿದ್ದರು. ನಾನು ಎಂಬುದನ್ನು ಮರೆತು ಬೇರೆ ನಟರ ನಟನೆಯನ್ನು ಹೊಗಳುತ್ತಿದ್ದರು. ಜಾತಿ, ಮತ, ಪಂಥ ಕೇಳದೇ ಎಲ್ಲರೊಂದಿಗೆ ಸಮಾನವಾಗಿ ಬೆರೆಯುವ ಡಾ. ರಾಜಕುಮಾರ ಅವರು ಸರಳವಾಗಿ ಬದುಕು ನಡೆಸುತ್ತಿದ್ದರು ಎಂದು ಹೇಳಿದರು.

ಡಾ. ರಾಜಕುಮಾರರ ಜನ್ಮದಿನವನ್ನು ಸರಕಾರದ ವತಿಯಿಂದ ಆಚರಿಸಲಾಗುತ್ತಿದೆ. ವರನಟ ಡಾ. ರಾಜಕುಮಾರ ಅವರ ಒಂದೊಂದು ಚಲನಚಿತ್ರಗಳು ಗುರಿ, ಧ್ಯೇಯ, ಉದ್ದೇಶ, ಸಾಮಾಜಿಕ ಪರಿವರ್ತನೆ ಹೀಗೆ ಸಮಾಜಕ್ಕೆ ಪೂರಕವಾಗುವ ಹಾಗೂ ಯುವಕರಿಗೆ ದಾರಿದೀಪವಾಗುವ ಸಂದೇಶಗಳನ್ನು ನೀಡುತ್ತಿದ್ದವು. ನಾಡು-ನುಡಿಗಾಗಿ ಅವರ ಸೇವೆ ಅಪಾರವಾಗಿದ್ದು, ಗೋಕಾಕ ಚಳವಳಿಗೆ ಡಾ. ರಾಜಕುಮಾರರು ಕಾಲಿಟ್ಟ ನಂತರ ಹೋರಾಟದ ದಿಕ್ಕೇ ಬದಲಾಯಿತು ಎಂದು ಅಭಿಮಾನದಿಂದ ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಡಾ. ರಾಜಕುಮಾರ ಅವರು ಒಬ್ಬ ವ್ಯಕ್ತಿಯಲ್ಲ, ಅವರೊಬ್ಬ ಶಕ್ತಿಯಾಗಿ, ಗಾಯಕರಾಗಿ ಕನ್ನಡದಲ್ಲಿ ಮೊಟ್ಟಮೊದಲ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಪಡೆದವರಲ್ಲಿ ಅಗ್ರಗಣ್ಯರು ಎಂದರು. ಡಾ. ರಾಜಕುಮಾರ ಅವರು ನಟನೆಗೆ ಸೀಮಿತವಾಗದೇ ಯುವಜನಕ್ಕೆ ದಾರಿದೀಪವಾಗಿದ್ದರು. ಅವರ ಸಿನಿಮಾಗಳಲ್ಲಿ ಅಶ್ಲೀಲ ಭಾಷೆ ಇರುತ್ತಿರಲಿಲ್ಲ, ದುಶ್ಚಟದ ಪಾತ್ರ ನಿರ್ವಹಿಸುತ್ತಿರಲಿಲ್ಲ. ಗೋಕಾಕ ಚಳವಳಿಯ ಮುಂಚೂಣಿ ವಹಿಸಿ ಕನ್ನಡ ಭಾಷೆ, ನಾಡು-ನುಡಿಗಾಗಿ ಅಮೂಲ್ಯ ಸೇವೆ ಸಲ್ಲಿಸಿ ಕನ್ನಡಿಗರ ಮನದಲ್ಲಿ ಹಚ್ಚಹಸಿರಾಗಿ ಉಳಿದಿದ್ದಾರೆ ಎಂದು ಹೇಳಿದರು.

ಝೀ ಕನ್ನಡ ವಾಹಿನಿಯ ಡ್ರಾಮಾ ಜ್ಯೂನಿಯರ್ಸ್ ರಿಯಾಲಿಟಿ ಶೋನಲ್ಲಿ ಭಾಗವಹಿಸಿದ್ದ ರೋಣ ತಾಲೂಕಿನ ಹರೀಶ ಪತ್ತಾರ ಅವರು ವರನಟ ಡಾ. ರಾಜಕುಮಾರರ ಭಕ್ತ ಪ್ರಹ್ಲಾದ ಚಲನಚಿತ್ರದ ಹಿರಣ್ಯಕಶ್ಯಪು ಪಾತ್ರವನ್ನು ಪ್ರದರ್ಶಿಸಿದರು. ನಂತರ ಹುಬ್ಬಳ್ಳಿಯ ಚಲನಚಿತ್ರ ನಿರ್ದೇಶಕ ಹಾಗೂ ನಟ ದಿಲೀಪ್ ಶರ್ಮಾ, ಗಾಯಕ ಗೌಡಪ್ಪ ಬೊಮ್ಮಪ್ಪನವರ, ಕಲಾವಿದ ಹರೀಶ್ ಪತ್ತಾರ ಅವರನ್ನು ಸನ್ಮಾನಿಸಲಾಯಿತು. ▶▶ 3ನೇ ಪುಟಕ್ಕೆ

### ದ್ರಾಕ್ಷಾಯಣಿ-ರೇವಣಸಿದ್ದಯ್ಯ ಬಾಳಿಹಳ್ಳಿಮಠ ವೇದಿಕೆ ಉದ್ಘಾಟಿಸಿದ ರಂಭಾಪುರಿ ಶ್ರೀಗಳು

# ಕಾಯಕನಿಷ್ಠೆಯಿಂದ ಶ್ರೇಯಸ್ಸು ಪ್ರಾಪ್ತಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ನ್ಯಾಯ, ನೀತಿ, ಧರ್ಮ ಮಾರ್ಗದಲ್ಲಿ ನಡೆಯುತ್ತಾ ಕ್ರಿಯಾಶೀಲತೆ ಮತ್ತು ಕಾಯಕನಿಷ್ಠೆ ಹೊಂದಿರುವ ವ್ಯಕ್ತಿಗಳು ಸಮಾಜದಲ್ಲಿ ಕೀರ್ತಿ, ಯಶಸ್ಸು, ಶ್ರೇಯಸ್ಸು ಹೊಂದುತ್ತಾರೆ ಎಂದು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ಅವರು ಗುರುವಾರ ಪಟ್ಟಣದ ಬಾಳಿಹಳ್ಳಿಮಠ ಕಲ್ಯಾಣ ಮಂಟಪದಲ್ಲಿ ನಡೆದ ರೇವಣಸಿದ್ದಯ್ಯನವರ ಸಹಸ್ರಚಂದ್ರ ದರ್ಶನ ಹಾಗೂ ಶ್ರೀಮತಿ ದ್ರಾಕ್ಷಾಯಣಿ ಶ್ರೀ ರೇವಣಸಿದ್ದಯ್ಯ ಬಾಳಿಹಳ್ಳಿಮಠ ವೇದಿಕೆ(ಸಭಾ ಮಂಟಪ)ದ ಉದ್ಘಾಟನೆ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಲಿಂ. ವೀರಗಂಗಾಧರ ಜಗದ್ಗುರುಗಳು ನಡೆದಾಡಿದ ಲಕ್ಷ್ಮೇಶ್ವರದ ಪುಣ್ಯಭೂಮಿಯಲ್ಲಿ ದೇವರು, ಧರ್ಮ, ಸಂಸ್ಕಾರ, ಮಾನವೀಯ ಮೌಲ್ಯ, ಗುರು-ಹಿರಿಯರ ಬಗ್ಗೆ ಗೌರವ, ಪ್ರೀತಿ ನೆಲೆಯೂರಿದೆ. ಇಂದು ಸಂಪತ್ತು ಗಳಿಸುವ ಭರದಲ್ಲಿ ಇದಾವುದನ್ನೂ ಮರೆಯದಿರಿ. ಎಲ್ಲರೊಂದಿಗೆ ಪ್ರೀತಿ-ಭಾಂಧವ್ಯ, ಸ್ನೇಹ-ಸೌಹಾರ್ದತೆಯ ಜೀವನದ ಜತೆಗೆ ಆರೋಗ್ಯ ಸಂಪತ್ತು ಹೊಂದುವುದು ಮುಖ್ಯವಾಗಿದೆ. ಇತ್ತೀಚಿನ ದಿನಗಳಲ್ಲಿ ಧಾರ್ಮಿಕ, ಸಾಮಾಜಿಕ, ಸಾಂಸ್ಕೃತಿಕ ಕಾರ್ಯಕ್ರಗಳ ಔಚಿತ್ಯ ಅರಿಯದೇ ನಿರಾಸಕ್ತಿ ತೋರುತ್ತಿರುವುದು ವಿಷಾದದ ಸಂಗತಿ.

ಮುಕ್ತಿಮಂದಿರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು, ಬನ್ನಿಕೊಪ್ಪ ಜಪದಕಟ್ಟಿಮಠದ ಡಾ. ಸುಜ್ಞಾನದೇವ ಶಿವಾಚಾರ್ಯರು ಆಶೀರ್ವಚನ ನೀಡಿದರು. ವಿ.ಪ ಸದಸ್ಯ ಎಸ್.ವಿ. ಸಂಕನೂರ ಮತ್ತು ಮುಖ್ಯ ಸಚೇತಕ ಮಹಾಂತೇಶ ಕವಟಗಿಮಠ ಮಾತನಾಡಿ, ಮನುಷ್ಯ ಸಮಾಜಮುಖಿಯಾಗಿ ಮತ್ತು ಸಮಾಜದಿಂದ ಲೇಸೆನಿಸಿಕೊಂಡು ಬದುಕಿದಾಗ ಮಾತ್ರ ಬದುಕು ಸಾರ್ಥಕ. ಅಂತಹ ಬದುಕು ಬಾಳಿದ ಹಿರಿಯರು ನಮಗೆಲ್ಲ ಆದರ್ಶ ಎಂದರು.

ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ ಮಾತನಾಡಿದರು. ಲಕ್ಷ್ಮೇಶ್ವರ ಕರೇವಾಡಿಮಠದ ಮಳೇಮಲ್ಲಿಕಾರ್ಜುನ ಶಿವಾಚಾರ್ಯರು, ಗಂಜಿಗಟ್ಟಿಯ ಡಾ. ವೈಜನಾಥ ಶಿವಲಿಂಗ ಶಿವಾಚಾರ್ಯರು, ಬಂಕಾಪುರ ಆರಳೆಲೆ ಹಿರೇಮಠದ ರೇವಣಸಿದ್ದೇಶ್ವರ ಶಿವಾಚಾರ್ಯರು, ನರೇಗಲ್ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ, ಅಬ್ಬಿಗೇರಿ ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು, ರೇವಣಸಿದ್ದಯ್ಯ ಬಾಳಿಹಳ್ಳಿಮಠ ದಂಪತಿಗಳು, ಬಾಳಿಹಳ್ಳಿಮಠ ಕುಟುಂಬದ ಡಾ. ರೇಣುಕ ಪ್ರಸಾದ, ಸಿದ್ಧರಾಮಸ್ವಾಮಿ, ವಿಜಯರುದ್ರಯ್ಯ, ವಿನಯಶಂಕರ ದಂಪತಿಗಳು ಸೇರಿ ಹಿರಿಯರು, ವಾಣಿಜ್ಯೋದ್ಯಮಿಗಳು, ಬಂಧು-ಬಳಗದವರು ಪಾಲ್ಗೊಂಡಿದ್ದರು. ಚಂದ್ರಣ್ಣ ಬಾಳಿಹಳ್ಳಿಮಠ, ಗುರುಪಾದಯ್ಯ ಹಿರೇಮಠ ನಿರೂಪಿಸಿದರು.

> ರೇವಣಸಿದ್ದಯ್ಯನವರು ಸದಾ ಚಟುವಟಿಕೆ, ಕ್ರಿಯಾಶೀಲತೆಯಿಂದ ಒಕ್ಕಲುತನದ ಜತೆಗೆ ವ್ಯಾಪಾರ ಮತ್ತು ರಾಜಕೀಯದ ಅನುಭವ ಹೊಂದಿ ಸ್ಫೂರ್ತಿಯ ಸೆಲೆಯಾಗಿದ್ದಾರೆ.
>
> ಸರಳ, ಸುಂದರ, ಆರ್ಥಿಕ ಶಿಸ್ತಿನ ಬದುಕು ಪ್ರೇರಣೆಯಾಗಿದ್ದು, ಸಹಸ್ರಚಂದ್ರ ದರ್ಶನದ ಸಂಭ್ರಮಾಚರಣೆಯಲ್ಲಿರುವ ದಂಪತಿಗಳಿಗೆ ಪರಮಾತ್ಮನು ಆಯುರಾರೋಗ್ಯ, ದೀರ್ಘಾಯುಷ್ಯ, ಸುಖ-ಶಾಂತಿ ದಯಪಾಲಿಸಲಿ ಎಂದು ರಂಭಾಪುರಿ ಶ್ರೀಗಳು ಆಶೀರ್ವದಿಸಿದರು.

## ಫುಟ್‌ಬಾಲ್ ತರಬೇತಿ ಶಿಬಿರಕ್ಕೆ ಸಚಿವರ ಭೇಟಿ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸಿಟಿ ಫುಟಬಾಲ್ ಕ್ಲಬ್ ವತಿಯಿಂದ ಕೆ.ಎಚ್. ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಸಲಾಗುತ್ತಿರುವ 5ರಿಂದ 18 ವರ್ಷದ ಬಾಲಕ, ಬಾಲಕಿಯರ ಫುಟ್‌ಬಾಲ್ ಬೇಸಿಗೆ ತರಬೇತಿ ಶಿಬಿರಕ್ಕೆ ಗುರುವಾರ ಸಾಯಂಕಾಲ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅನಿರೀಕ್ಷತ ಭೇಟಿ ನೀಡಿ ತರಬೇತಿ ಶಿಬಿರವನ್ನು ವೀಕ್ಷಿಸಿ ಹರ್ಷ ವ್ಯಕ್ತಪಡಿಸಿದರು.

ಈ ಅನಿರೀಕ್ಷಿತ ಭೇಟಿ ನಮಗೆ ಸಂತಸ ತಂದಿದೆ.

ಸಚಿವರ ಪ್ರೇರಣೆಯ ಮಾತುಗಳು ತರಬೇತಿದಾರರಲ್ಲಿ ಮತ್ತು ಕ್ರೀಡಾಪಟುಗಳಲ್ಲಿ ದೊಡ್ಡ ಕನಸುಗಳನ್ನು ಬಿತ್ತಿದೆಯಲ್ಲದೆ, ಮುಂದಿನ ದಿನಗಳಲ್ಲಿ ಗದಗ ಜಿಲ್ಲೆಯಿಂದ ರಾಜ್ಯ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರತಿನಿಧಿಸುವಂತೆ ತರಬೇತಿ ನೀಡಲಾಗುವುದೆಂದು ಗದಗ ಸಿಟಿ ಫುಟಬಾಲ್ ಕ್ಲಬ್ ಅಧ್ಯಕ್ಷರು ಹಾಗೂ ಮುಖ್ಯ ತರಬೇತಿದಾರರಾದ ಸ್ಯಾಮಸನ್ ಡೆನಿಸ್ ಡಾನ್, ಶಶಿಕುಮಾರ ಮುಂಡರಗಿ, ರಾಘವೇಂದ್ರ ಮುಂಡರಗಿ, ರಿಚರ್ಡ್ ಎಂ.ಧರ್ಮದಾಸ್, ಎಡ್ವರ್ಡ್ ಎಂ.ಧರ್ಮದಾಸ್, ಅಗಸ್ಟಿನ್ ಜಾನ್ ವಿಶ್ವಾಸ ವ್ಯಕ್ತಪಡಿಸಿದರು.

### ಉಗ್ರರಿಂದ ಹತ್ಯೆಯಾದ ಭಾರತೀಯರಿಗೆ ಬಿಜೆಪಿ ವತಿಯಿಂದ ಶ್ರದ್ಧಾಂಜಲಿ

# ರಕ್ತಪಿಪಾಸು ಉಗ್ರರ ಕೃತ್ಯ ಖಂಡನೀಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಿರ್ದಿಷ್ಟವಾಗಿ ಹಿಂದೂ ಪ್ರವಾಸಿಗರ ಮೇಲೆ ರಕ್ತಪಿಪಾಸು ಉಗ್ರರು ನಡೆಸಿದ ದುಷ್ಕೃತ್ಯ ಅತ್ಯಂತ ಖಂಡನೀಯ. ಕೇಂದ್ರ ಸರ್ಕಾರ ಈ ರಾಕ್ಷಸರನ್ನು ಪಾತಾಳದಲ್ಲಿ ಅಡಗಿದ್ದರೂ ಹುಟ್ಟಡಗಿಸದೇ ಬಿಡುವುದಿಲ್ಲ ಎಂದು ಶಾಸಕ ಡಾ. ಚಂದ್ರು ಲಮಾಣಿ ಆಕ್ರೋಶ ವ್ಯಕ್ತಪಡಿಸಿದರು.

ಅವರು ಗುರುವಾರ ಬಿಜೆಪಿ ಪಕ್ಷದಿಂದ ಶಿಗ್ಲಿ ನಾಕಾದಲ್ಲಿ ಮೋಂಬತ್ತಿ ಬೆಳಗಿಸುವ ಮೂಲಕ ಪಹಲ್ಗಾಮ್‌ನಲ್ಲಿ ಉಗ್ರರ ಗುಂಡಿನ ದಾಳಿಗೆ ಬಲಿಯಾದ 26 ಜನ ಭಾರತೀಯರ ಆತ್ಮಗಳಿಗೆ ಶ್ರದ್ಧಾಂಜಲಿ ಸಲ್ಲಿಸಿ ಮಾತನಾಡಿ, ಹತ್ಯೆ ಮಾಡುವ ಮುನ್ನ ಅವರ ಐಡಿ ಹಾಗೂ ಧರ್ಮವನ್ನು ತಿಳಿದು ಹತ್ಯೆ ಮಾಡಿದ್ದು ಪೈಶಾಚಿಕ ಕೃತ್ಯ. ದೇಶದ ಏಕತೆ ಹಾಗೂ ಅಖಂಡತೆ-ಗೆ ಧಕ್ಕೆಯುಂಟುಮಾಡಲು ಇಂಥಹ ದುಷ್ಕೃತ್ಯ ಎಸಗಲಾಗಿದೆ. ಜಗತ್ತಿನಲ್ಲಿ ಭಾರತದ ಕೀರ್ತಿ ಹೆಚ್ಚಾಗುತ್ತಿದ್ದು, ಎಲ್ಲ ದೇಶಗಳು ಭಾರತದ ಏಳಿಗೆಯನ್ನು ಮುಕ್ತಕಂಠದಿಂದ ಹೊಗಳುತ್ತಿವೆ.ಈ ರಾಕ್ಷಸರಿಗೆ ಇದನ್ನು ಸಹಿಸಲಾಗುತ್ತಿಲ್ಲ.

ಈ ನರಭಕ್ಷಕರ ಹುಟ್ಟಡಗಿಸಲು ದೇಶದ ಪ್ರಧಾನಿ ನರೇಂದ್ರಮೋದಿ, ರಕ್ಷಣಾ ಸಚಿವ ರಾಜನಾಥ್‌ಸಿಂಗ್, ಗೃಹ ಸಚಿವ ಅಮಿತ್ ಶಾ ಅವರು ಉನ್ನತ ಮಟ್ಟದ ಸಭೆ ನಡೆಸಿ ಉಗ್ರಗಾಮಿಗಳ ಹೆಡೆಮುರಿ ಕಟ್ಟಲು ದಿಟ್ಟ ನಿರ್ಧಾರ ಕೈಗೊಳ್ಳಲಿದ್ದಾರೆ. ದೇಶಪ್ರೇಮಿಗಳಾದ ನಮ್ಮ ಸೇನೆಯೂ ಸನ್ನದ್ಧವಾಗಿದೆ ಎಂದರು.

ಈ ವೇಳೆ ಶಿರಹಟ್ಟಿ ಬಿಜೆಪಿ ಮಂಡಲದ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಪುರಸಭೆ ಸದಸ್ಯೆ ಅಶ್ವಿನಿ ಅಂಕಲಕೋಟಿ, ಮಂಜುಳಾ ಗುಂಜಳ, ಪ್ರ. ಕಾರ್ಯದರ್ಶಿ ಅನಿಲ ಮುಳಗುಂದ, ನಗರ ಅಧ್ಯಕ್ಷ ನವೀನ ಬೆಳ್ಳಟ್ಟಿ, ನೀಲಪ್ಪ ಹತ್ತಿ, ನಿಂಗಪ್ಪ ಬನ್ನಿ, ಮಹಾದೇವಪ್ಪ ಅಣ್ಣಿಗೇರಿ, ದುಂಡೇಶ ಕೊಟಗಿ, ನವೀನ ಹಿರೇಮಠ, ಶಕ್ತಿ ಕತ್ತಿ, ಮಂಜನಗೌಡ ಕೆಂಚನಗೌಡ, ಪ್ರವೀಣ ಬೋಮಲೆ, ವಿಜಯ ಕುಂಬಾರ, ವಿಜಯ ಮೆಕ್ಕಿ, ಆದೇಶ ಸವಣೂರ, ಕಿರಣ ಗಾಣಗೇರ, ಅಮಿತ ಗುಡಗೇರಿ, ಈರಣ್ಣ ಪೂಜಾರ, ಚಂದ್ರು ಹಂಪಣ್ಣವರ ಹರೀಶ ಕಟ್ಟಿಮನಿ, ಗಿರೀಶ ಚೌರಡ್ಡಿ, ಕಿರಣ ಮಹಾಂತಶೆಟ್ಟರ, ಸಂತೋಷ ಜಾವೂರ, ಹನುಮಂತ ರಾಮಗೇರಿ, ಶಾಂತವೀರಯ್ಯ ಮಠಪತಿ, ವಿಶಾಲ ಬಟಗುರ್ಕಿ ಸೇರಿ ಅನೇಕ ಬಿಜೆಪಿ ಕಾರ್ಯಕರ್ತರಿದ್ದರು.



ಜಿಲ್ಲಾ ಆಡಳಿತದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ AEO ಆದ ಪ್ರಶಾಂತ್ ಜೆ ಸಿ ಅವರಿಗೆ ಸೇವಾ ಪ್ರಶಸ್ತಿ ದೊರಕಿದ ಪ್ರಯುಕ್ತ ಕೆ. ಎಚ್ ಪಾಟೀಲ್ ವೈದ್ಯಕೀಯ ವಿಜ್ಞಾನ ಗಳ ಸಂಸ್ಥೆಯ ಹೊರಗುತ್ತಿಗೆ ಸಿಬ್ಬಂದಿಗಳ ವತಿಯಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ನಿರ್ದೇಶಕರಾದ ಡಾ. ಬಸವರಾಜ್ ಬೊಮ್ಮನಹಳ್ಳಿ, ವೈದ್ಯಾಧಿಕಾರಿಗಳು, ಸುಶ್ರುತಾಧಿಕಾರಿಗಳು, ಸಿಬ್ಬಂದಿಗಳು, ಹೊರಗುತ್ತಿಗೆ ಸಿಬ್ಬಂದಿಗಳ ಮೇಲ್ವಿಚಾರಕರಾದ ಮಲ್ಲಪ್ಪ ಭಾವಿಮಾನಿ, ಕೃಷ್ಣ ಮಡಿವಾಳ, ಮನೋಜ್ ಆಡುಮುರಿ, ಪ್ರಭು ಬಾಲಪ್ಪನವರ್, ಮಂಜು ಚಲವಾದಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಇಂದು ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಈ ವರ್ಷವು 04.05.2025 ರಂದು ಆಚರಿಸಲಾಗುವ ಭಗೀರಥ ಜಯಂತಿ ನಿಮಿತ್ತ ದಿ. 25.04.2025 ರ ಶುಕ್ರವಾರ ಮಧ್ಯಾಹ್ನ 3.00 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಹಾಗೆಯೇ

ದಿ:10.05.2025 ರಂದು ಆಚರಿಸಲಾಗುವ ಶ್ರೀ ಹೇಮರಡ್ಡಿ ಮಲ್ಲಮ್ಮ ಜಯಂತಿ ನಿಮಿತ್ತ ಸಾಯಂಕಾಲ:4.00 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ತಾವು ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವಕರ್ಮ ವಿದ್ಯಾರ್ಥಿ ವಿಕಾಸ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಂಗ ಸಂಸ್ಥೆಗಳ ವತಿಯಿಂದ ನಗರದ ವಿಜಯನಗರ ಬಡಾವಣೆಯ ಶ್ರೀ ವಿಶ್ವಕರ್ಮ ಸಮುದಾಯ ಭವನದಲ್ಲಿ ದಿನಾಂಕ 25 ರಿಂದ ಹತ್ತು ದಿನಗಳ ವರೆಗೆ ಆಧ್ಯಾತ್ಮ, ವಿಜ್ಞಾನ, ತಂತ್ರಜ್ಞಾನ, ಸಂಸ್ಕಾರ, ಸಂಸ್ಕೃತಿ ವಿಷಯಗಳ ವಿಶ್ವಕರ್ಮ ವಿದ್ಯಾರ್ಥಿ ವಿಕಾಸ ಶಿಬಿರ ಹಮ್ಮಿಕೊಳ್ಳಲಾಗಿದೆ.

ದಿ.25ರ ಶುಕ್ರವಾರ ಮುಂಜಾನೆ 10:00 ಗಂಟೆಗೆ ಉದ್ಘಟನಾ ಸಮಾರಂಭ ಜರುಗಲಿದೆ. ಹಿಂದುಳಿದ ವರ್ಗಗಳ ಸಮುದಾಯ ಮಹಾ ಮಂಡಳಿ ಅಧ್ಯಕ್ಷ ಮಲ್ಲಿಕಾರ್ಜುನ ಐಲಿ ಉದ್ಘಾಟಿಸುವರು. ಗ.ಜಿ.ವಿ.ನೌ.ಸಂ ಸಂಸ್ಥಾಪಕ ಅಧ್ಯಕ್ಷರಾದ ರಾಜಗೋಪಾಲ ಕಡ್ಲಿಕೊಪ್ಪ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಮಹೇಶ ಪೋತದಾರ, ಶಿರಹಟ್ಟಿ ತಹಸೀಲ್ದಾರ್ ಅನಿಲ ಬಡಿಗೇರ, ಧಾರವಾಡ ಕವಿವಿ ವಿಶ್ರಾಂತ ಪ್ರಾಧ್ಯಾಪಕರಾದ ಡಾ.ಕೆ.ಪಿ. ಈರಣ್ಣ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಯ. ಕಮ್ಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 'ವಚನ ದರ್ಶನ-ಮಿಥ್ಯ, ಸತ್ಯ' ಗ್ರಂಥದ ಬಿಡುಗಡೆ ಸಮಾರಂಭದಲ್ಲಿ ಸಿದ್ಧರಾಮ ಶ್ರೀಗಳು

# 'ವಚನ ದರ್ಶನ' ಧರ್ಮ ವಿರೋಧಿ ಕೃತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾಲಚಕ್ರ ತಿರುಗುತ್ತಿದೆ, ಹಲವು ಬದಲಾವಣೆಗಳಾಗುತ್ತಿವೆ. ಅದೇ ತೆರನಾಗಿ ಲಿಂಗಾಯತ ಸಂಘಟನೆಗಳಿಗೂ ಇದು ಅನ್ವಯಿಸುತ್ತಿದೆ. ವೀರಶೈವ ಮಹಾಸಭೆ ಇಂದು ಲಿಂಗಾಯತ ಪದ ಜೋಡಿಸಿಕೊಂಡು ವೀರಶೈವ-ಲಿಂಗಾಯತ ಮಹಾಸಭೆಯಾಗಿ ಪರಿವರ್ತನೆಯಾಗಿದೆ. ಮುಂದೊಂದು ದಿನ ಅದು ವೀರಶೈವವನ್ನು ಕಳಚಿಕೊಳ್ಳಬಹುದು. ಈ ಬದಲಾವಣೆಯ ಪರ್ವವೇ ಅಂತಹುದು. ಇಂದು ಬಸವಣ್ಣ ಸಾಂಸ್ಕೃತಿಕ ನಾಯಕರಾಗಿದ್ದಾರೆ, ಬಸವ ತತ್ವ ಬಹುಜನರಿಗೆ ಮುಟ್ಟುತ್ತಿದೆ. ಲಿಂಗಾಯತರು ಕ್ರಮೇಣ ಸತ್ಯವನ್ನರಿಯುತ್ತಿದ್ದಾರೆ. ಅದಕ್ಕೆ ವೀರಶೈವ ಲಿಂಗಾಯತ ಮಹಾಸಭೆಯವರು 'ವಚನ ದರ್ಶನ'ವೆಂಬ ಧರ್ಮವಿರೋಧಿ ಕೃತಿ ವಿರುದ್ಧದ ಹೋರಾಟದಲ್ಲಿ ಜಾಗತಿಕ ಲಿಂಗಾಯತ ಮಹಾಸಭೆಯುವರೊಂದಿಗೆ ಕೈಜೋಡಿಸಿದ್ದೇ ಸಾಕ್ಷಿಯಾಗಿದೆ ಎಂದು ಗದುಗಿನ ತೋಂಟ-ದಾರ್ಯ ಮಠದ ಪೂ. ಶ್ರೀ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.



ಅವರು ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಜರುಗಿದ 'ವಚನ ದರ್ಶನ-ಮಿಥ್ಯ, ಸತ್ಯ' ಗ್ರಂಥದ ಬಿಡುಗಡೆ ಸಮಾರಂಭದಲ್ಲಿ ಮಾತನಾಡುತ್ತ, ಬಸವಧರ್ಮದ ಹುಟ್ಟಿನಿಂದಲೂ ವಿರೋಧಿಗಳಿಂದ ಹಲವಾರು ಸವಾಲುಗಳನ್ನು ಎದುರಿಸುತ್ತಲೇ ಬಂದಿದೆ. ಆದರೆ ತನ್ನ ತತ್ವಗಳಿಂದ ಅದು ಹಲವು ಸಂಕಟಗಳನ್ನು ಎದುರಿಸಿಯೂ ಗಟ್ಟಿಯಾಗಿ ನಿಂತಿದೆ. ಆದರೆ ಪುರೋಹಿತಶಾಹಿತ್ವದ ಸಂಘಟನೆಗಳು ಇಂದೂ ಆ ಧರ್ಮದ ಮೇಲೆ ಹಿಡಿತ ಸಾಧಿಸಲು, ಅದನ್ನು ಮುಗಿಸಲು ಹೊಂಚುಹಾಕುತ್ತಿವೆ. ಅದರ ಕೈಗನ್ನಡಿಯೇ 'ವಚನ ದರ್ಶನ'ವೆಂಬ ಕೃತಿಯಾಗಿದೆ.

ಸಂಘಪರಿವಾರ ಮೂಲದ ಅಯೋಧ್ಯ ಪ್ರಕಾಶನದಿಂದ ಪ್ರಕಟಿತ ಈ ಕೃತಿಯಲ್ಲಿ ಬಸವಾದಿ ಶರಣರ ಆಶಯಗಳಿಗೆ ವಿರುದ್ಧವಾದ ಅಂಶಗಳೇ ತುಂಬಿವೆ. ಯಾವ ಶರಣರು ಸದಾ ವಿರೋಧಿಸುತ್ತ ಬಂದಿದ್ದರೋ ಆ ವರ್ಣಾಶ್ರಮ ಸಂಸ್ಕೃತಿಯನ್ನು ಪೋಷಿಸಿದ್ದಾರೆನ್ನುವ ರೀತಿಯಲ್ಲಿ ಈ ಗ್ರಂಥದ ಲೇಖನಗಳಲ್ಲಿ ಮೂಡಿ ಬಂದಿದೆ. ಇದು ಬಸವಾಭಿಮಾನಿಗಳಲ್ಲಿ ಆಕ್ರೋಶ, ಕಳವಳವನ್ನು ಹುಟ್ಟು ಹಾಕಿದ್ದು, ಈ ಗ್ರಂಥಕ್ಕೆ ಉತ್ತರವಾಗಿ ಜಾಲಿಂಮ ಸಂಘಟನೆಯಿಂದ 'ವಚನ ದರ್ಶನ ಮಿಥ್ಯ, ಸತ್ಯ' ಗ್ರಂಥ ಪ್ರಕಟವಾಗುತ್ತಿದೆ. ಅನೇಕ ಹಿರಿಯರು ಅಭ್ಯಾಸಪೂರ್ಣವಾಗಿ ಬರೆದ ಲೇಖನಗಳ ಉತ್ತರವೇ ಈ ಗ್ರಂಥವಾಗಿದೆ ಎಂದು ಪೂಜ್ಯರು ನುಡಿದರು.

ಈ ಗ್ರಂಥದಲ್ಲಿ ಶರಣರ ನೈಜ ವಿಚಾರಗಳನ್ನು ಪ್ರಸ್ತುತಪಡಿಸಿದ್ದೇವೆ. ಸದ್ಯ ಈ ಗ್ರಂಥ ಲೋಕಾರ್ಪಣೆಯಾಗುತ್ತಿದೆ. ಇದನ್ನು ರಾಜ್ಯದ ಹಲವೆಡೆ ಬಿಡುಗಡೆಗೊಳಿಸುತ್ತಿದ್ದೇವೆ. ಈ ಹಿನ್ನೆಲೆಯಲ್ಲಿ ತುಂಬ ಉತ್ಸಾಹದಿಂದ ಕಾರ್ಯಗೈಯುತ್ತಿರುವ ಜಾಗತಿಕ ಲಿಂಗಾಯತ ಮಹಾಸಭೆಯವರ ಜೊತೆಗೆ ವೀರಶೈವ ಮಹಾಸಭೆಯವರು ಕೈಜೋಡಿಸಿದ್ದು ಮಹತ್ವಪೂರ್ಣವಾಗಿದೆ ಎಂದರು.

ಹಲವಾರು ಲಿಂಗಾಯತ ಸಂಘಟನೆಗಳಿವೆ. ನಮ್ಮಲ್ಲಿನ ಹಲವು ಪೂರ್ವಾಗ್ರಹ ಪೀಡಿತ ಮನೋಭಾವಗಳನ್ನು ತೆ-ಊಡೆದು ಹಾಕಿ ಬಸವಣ್ಣನನ್ನೇ ಆರಾಧ್ಯ, ವಚನಗಳೇ ದಾರಿದೀಪ ಮಾಡಿಕೊಂಡಲ್ಲಿ ಲಿಂಗಾಯತ ಧರ್ಮದ ಅಸ್ಮಿತೆಯನ್ನು ಉಳಿಸಲು ಸಾಧ್ಯವಿದೆ ಎಂದರು.

ವಚನಗಳು ಈ ನಾಡಿನ ಸಂಪತ್ತು. ನಮ್ಮದು ಬಸವ ತತ್ವ ಬೆಂಬಲಿಸುವ ಮಠ, ಆದರೆ ಬಸವ ತತ್ವಕ್ಕೆ ವ್ಯತಿರಿಕ್ತವಾಗಿರುವ ಶ್ರೀಗಳ ಅಭಿಪ್ರಾಯಕ್ಕೆ ಯಾವುತ್ತೂ ನಮ್ಮ ಒಪ್ಪಿಗೆಯಿಲ್ಲ. ಅದು ನಮ್ಮ ಮಠದ ಪರಂಪರೆಯೂ ಅಲ್ಲ. ಅವರ ವಿಚಾರಗಳನ್ನು ನಾವು ಖಂಡಿಸುತ್ತೇವೆ. ಶಿವಾನಂದ ಪರಂಪರೆಯಂತೆ ನಾವು ಶರಣತತ್ವ ಒಪ್ಪುವೆವು. ನಮ್ಮ ಮಠದಲ್ಲಿ ಜಾತಿ ನೋಡದೆ ಲಿಂಗಧಾರಣೆ ಮಾಡಿದ್ದೇವೆ. ಕುರುಬ ಜನಾಂಗ, ತಳವಾರ ಜನಾಂಗದವರನ್ನು ನಮ್ಮ ಮಠಕ್ಕೆ ಪೀಠಾಧಿಕಾರಿಗಳನ್ನಾಗಿ ಮಾಡಿದ್ದು ಇದೆ. ಮಠದ ತತ್ವಕ್ಕೆ ಆಕರ್ಷಿತರಾಗಿ ಬಂದು ದೀಕ್ಷೆ ಪಡೆದ ಮುಸ್ಲಿಂರೊಬ್ಬರನ್ನು ರೋಣ ಮಠಕ್ಕೆ ಸ್ವಾಮಿಗಳಾಗಿ ನೇಮಕ ಮಾಡಲಾಗಿತ್ತೆಂದು ಪೂ. ಅಭಿನವ ಶಿವಾನಂದ ಮಹಾಸ್ವಾಮಿಗಳು ತಿಳಿಸಿದರು.

ಇದೇ ಸಮಾರಂಭದಲ್ಲಿ ಮಾತನಾಡಿದ ಶಿವಾನಂದ ಮಠದ ಪೂ. ಅಭಿನವ ಶಿವಾನಂದ ಮಹಾಸ್ವಾಮಿಗಳು, ವಚನ ದರ್ಶನ ಪುಸ್ತಕದ ಗೌರವ ಸಂಪಾದಕ ಸದಾಶಿವಾನಂದ ಸ್ವಾಮಿ ಅವರ ನಿಲುವು ವೈಯಕ್ತಿಕವಾದುದು. ಅದು ನಮ್ಮ ಮಠಕ್ಕೆ ಯಾವುದೇ ಸಂಬಂಧವಿಲ್ಲ. ಅವರದು ಅಕ್ಷಮ್ಯವಾದ ನಡೆ ಎಂದು ಹೇಳಿದರು.

ನಂತರ ಮೂರುಸಾವಿರ ಮಠದ ಡಾ. ಗುರುಸಿದ್ಧರಾಜಯೋಗೀಂದ್ರ ಮಹಾಸ್ವಾಮೀಗಳು, ಹುಬ್ಬಳ್ಳಿಯವರು ಮಾತನಾಡಿದರು.

## ಉಗ್ರರ ಹುಟ್ಟಡಗಿಸಲು ಶ್ರೀಶೈಲ ಜಗದ್ಗುರುಗಳ ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಇತ್ತೀಚೆಗೆ ಕಾಶ್ಮೀರದ ಫೆಹಲ್ಗಾಂವ್‌ನಲ್ಲಿ ನಡೆದ ಉಗ್ರರ ಪೈಶಾಚಿಕ ಕೃತ್ಯವು ಹಿಂದೂ ಸಮಾಜಕ್ಕೆ ಆಘಾತ ಉಂಟುಮಾಡಿದ್ದು, ಉಗ್ರರ ಹುಟ್ಟಡಗಿಸಲು ಕೇಂದ್ರ ಸರಕಾರ ಅತ್ಯಂತ ಬಿಗಿ ಕ್ರಮಗಳನ್ನು ಕೈಕೊಳ್ಳಬೇಕೆಂದು ಎಂದು ಶ್ರೀಶೈಲ ಜಗದ್ಗುರು ಡಾ.ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದರು ಆಗ್ರಹಿಸಿದ್ದಾರೆ.



ಹಿಂದುಗಳು ಬಹುಸಂಖ್ಯಾತರಾಗಿರುವ ಭಾರತಕ್ಕೆ ಬಂದು ಧರ್ಮಾಧಾರಿತವಾಗಿ ಹತ್ಯೆ ಮಾಡಿರುವುದರ ಹಿಂದೆ ಶತ್ರು ರಾಷ್ಟ್ರಗಳ ಕುಮ್ಮಕ್ಕು ಇದ್ದಂತಿದೆ. ಈ ಸಂದರ್ಭದಲ್ಲಿ ಕೇವಲ ಆಂತರಿಕ ಭದ್ರತೆಯ ಕಡೆ ಗಮನ ಕೊಟ್ಟು ಸುಮ್ಮನಾಗದೆ, ಈ ಹಿಂದೆ ಅಮೆರಿಕಾದ ಪೆಂಟಾಗಾನ್ ಕಟ್ಟಡದ ಮೇಲೆ ದಾಳಿ ನಡೆಸಿದ ಒಸಾಮ ಬಿನ್ ಲಾಡೆನ್‌ನನ್ನು ಆತನು ಅಡಗಿ ಕುಳಿತದ್ದಲ್ಲಿಗೆ ಹೋಗಿ ಅಮೆರಿಕಾ ಸೇನೆ ಹತ್ಯೆ ಮಾಡಿದಂತೆ, ನರೇಂದ್ರ ಮೋದಿಯವರು ಕೃತ್ಯದ ಹೊಣೆ ಹೊತ್ತಿರುವ ಉಗ್ರ ಸಂಘಟನೆಯನ್ನು ಬೇರು ಸಮೇತ ಕಿತ್ತು ಹಾಕಬೇಕು. ಆಗ ಮಾತ್ರ ಉಗ್ರವಾದಿಗಳ ಇಂತಹ ಹೇಯ ಕೃತ್ಯಗಳು ಸಂಪೂರ್ಣವಾಗಿ ನಿಲ್ಲಲು ಸಾಧ್ಯವಾಗುತ್ತದೆ ಎಂದು ಶ್ರೀಶೈಲ ಜಗದ್ಗುರುಗಳು ಹೇಳಿದ್ದಾರೆ.

## ನಾಳೆ ಕಾಂಗ್ರೆಸ್‌ನಿಂದ ಶ್ರದ್ಧಾಂಜಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರಗಾಮಿಗಳು ನಡೆಸಿದ ಹೇಯ ಕೃತ್ಯದಲ್ಲಿ ಸಾವನ್ನಪ್ಪಿದ ನಾಗರಿಕರಿಗೆ ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಮೇಣದಬತ್ತಿ ಹಚ್ಚಿ ಶ್ರದ್ಧಾಂಜಲಿ ಸಲ್ಲಿಸುವ ಕಾರ್ಯಕ್ರಮವನ್ನು ಎಪ್ರಿಲ್ 26ರಂದು ಸಂಜೆ 7ಕ್ಕೆ ಹಮ್ಮಿಕೊಳ್ಳಲಾಗಿದೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರು ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಜಿ.ಎಸ್. ಪಾಟೀಲ ಅವರು ನೇತೃತ್ವ ವಹಿಸುವರು. ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಪಕ್ಷದ ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ ಪಾಲ್ಗೊಳ್ಳುತ್ತಾರೆ. ಪಕ್ಷದ ಎಲ್ಲಾ ಘಟಕಗಳ ಪದಾಧಿಕಾರಿಗಳು ಹಾಗೂ ಅಭಿಮಾನಿಗಳು ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಾಮೂಹಿಕ ಕಂದಕ ಬದು ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದ ವಿಶ್ವನಾಥ ಹೊಸಮನಿ

# ನರೇಗಾ ಕಾಮಗಾರಿ ಗ್ರಾಮೀಣ ಜನರಿಗೆ ಆಸರೆ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಬೇಸಿಗೆಯಲ್ಲಿ ಕೃಷಿ ಚಟುವಟಿಕೆ ಹಾಗೂ ಇತರೆ ಕೆಲಸಗಳು ವಿರಳ. ಸಮುದಾಯ ಕಾಮಗಾರಿಗಳನ್ನು ಆರಂಭಿಸಿ ಗುಳೇ ಹೋಗುವುದನ್ನು ತಪ್ಪಿಸುವುದರ ಜೊತೆಗೆ ಗ್ರಾಮೀಣ ಜನರ ಆರ್ಥಿಕ ಮಟ್ಟ ಸುಧಾರಿಸಲು ನರೇಗಾ ಯೋಜನೆಯ ಕೊಡುಗೆ ದೊಡ್ಡದು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವಿಶ್ವನಾಥ ಹೊಸಮನಿ ಹೇಳಿದರು.

ಬಿದರಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮುಂಡವಾಡ ಗ್ರಾಮದ 2025-26ನೇ ಸಾಲಿನ ನರೇಗಾ ಸಾಮೂಹಿಕ ಕಂದಕ ಬದು ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪಂಚಾಯತ ರಾಜ್ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




ಪ್ರಸ್ತುತ ಬೇಸಿಗೆ ಕಾಲದಲ್ಲಿ ನರೇಗಾ ಯೋಜನೆಯಡಿ ತಾಲೂಕಿನ 19 ಗ್ರಾ.ಪಂ ವ್ಯಾಪ್ತಿಯಲ್ಲಿ ನರೇಗಾ ಸಮುದಾಯ ಕಾಮಗಾರಿಗಳನ್ನು ಆರಂಭಿಸಿ ಜನರಿಗೆ ಕೆಲಸ ನೀಡುವುದರ ಜೊತೆಗೆ ಆರ್ಥಿಕವಾಗಿ ಸಬಲರನ್ನಾಗಿಸಲಾಗುತ್ತಿದೆ. ಉದ್ಯೋಗ ಖಾತರಿ ಕೂಲಿ ಮೊತ್ತ ಎ.1ರಿಂದ 370 ರೂಪಾಯಿಗಳಿಗೆ ಏರಿಕೆಯಾಗಿದೆ. ಕೂಲಿಕಾರರು ಗ್ರಾಮ ಪಂಚಾಯಿತಿಗೆ ಬೇಡಿಕೆ ಸಲ್ಲಿಸಿ ಕೆಲಸ ಪಡೆಯಬೇಕು. ಉದ್ಯೋಗ ಖಾತರಿ ಯೋಜನೆಯಡಿ ವರ್ಷಕ್ಕೆ 100 ದಿನಗಳ ಕೆಲಸ ಮಾಡಲು ಅವಕಾಶವಿದೆ ಎಂದು ವಿಶ್ವನಾಥ ಹೊಸಮನಿ ತಿಳಿಸಿದರು.

ಅಳತೆಗೆ ತಕ್ಕಂತೆ ಕೂಲಿ ಮೊತ್ತ ಪಾವತಿಯಾಗುವುದರಿಂದ ಅಳತೆಗೆ ತಕ್ಕಂತೆ ಕೆಲಸ ಮಾಡಬೇಕು. ಪ್ರತಿದಿನ ಎನ್‌ಎಂಎಂಎಸ್ ಮೂಲಕ ಎರಡು ಬಾರಿ ಹಾಜರಾತಿ ತೆಗೆದುಕೊಳ್ಳಲಾಗುತ್ತದೆ. ಕೂಲಿಕಾರರು ಎರಡು ಹಾಜರಾತಿಯಲ್ಲಿ ಕಡ್ಡಾಯವಾಗಿ ಭಾಗವಹಿಸಿ ಹಾಜರಾತಿ ಹಾಕಿಸಬೇಕು. ಒಂದು ವೇಳೆ ಒಂದು ಹಾಜರಾತಿ ಹಾಕಿಸದಿದ್ದರೂ ಆ ದಿನದ ಕೂಲಿ ಮೊತ್ತ ಪಾವತಿಯಾಗುವುದಿಲ್ಲ. ಎನ್‌ಎಂಆರ್‌ನಲ್ಲಿ ಹೆಸರು ಇದ್ದವರಷ್ಟೇ ಕೆಲಸದಲ್ಲಿ ಹಾಜರಾಗಬೇಕು ಎಂದು ಕೂಲಿಕಾರರಿಗೆ ಸೂಚಿಸಿದರು.

ಬೇಸಿಗೆಯಲ್ಲಿ ಅಂದರೆ ಎಪ್ರಿಲ್ ಹಾಗೂ ಮೇ ತಿಂಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ ಕೆಲಸ ಇಲ್ಲದ ಕಾರಣ ನರೇಗಾ ಯೋಜನೆಯಡಿ ಕೆಲಸ ನೀಡಲಾಗುತ್ತದೆ. ಇದರ ಸದುಪಯೋಗವನ್ನು ಗ್ರಾಮೀಣ ಭಾಗದ ಜನ ಪಡೆಯಬೇಕು ಎಂದರು. ತಾಂತ್ರಿಕ ಸಂಯೋಜಕ ಪ್ರವೀಣ ಸೂಡಿ, ಗ್ರಾ.ಪಂ ಸಿಬ್ಬಂದಿ ಹಾಗೂ ಕೂಲಿಕಾರ್ಮಿಕರು ಉಪಸ್ಥಿತರಿದ್ದರು.

## 'ಅರಿವು' ವಿದ್ಯಾಭ್ಯಾಸ ಸಾಲ ಯೋಜನೆಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ-ಗದಗ ಇವರ ವತಿಯಿಂದ 2025-26ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಭೌದ್ಧರು, ಸಿಖ್, ಫಾರ್ಸಿ ಜನಾಂಗದವರಿಗೆ ಅರಿವು ವಿದ್ಯಾಭ್ಯಾಸ (Arivu Fresh) ಸಾಲ ಯೋಜನೆಯಡಿಯಲ್ಲಿ ನಿಗಮದಿಂದ ಸಾಲ ಸೌಲಭ್ಯಗಳನ್ನು ನೀಡಲಾಗುತ್ತಿದೆ.

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅರಿವು ವಿದ್ಯಾಭ್ಯಾಸ ಸಾಲ ಯೋಜನೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ KEA via CET/NEET ನಲ್ಲಿ ಆಯ್ಕೆಯಾಗುವ Medical (MBBS, B.D.S) B.E, B.Tech, Bachelor of Architecture, Bachelor of Ayush, Pharmacy, Veterinary And Farm Science, ಇಂತಹ ಕೋರ್ಸ್‌ಗಳಿಗೆ ಆಯ್ಕೆಯಾದ ಅಲ್ಪಸಂಖ್ಯಾತ ವಿದ್ಯಾರ್ಥಿಗಳು 'ಅರಿವು' ಯೋಜನೆಯಡಿ ಶೈಕ್ಷಣಿಕ ಸಾಲವನ್ನು ಪಡೆಯಲು ಅಪೇಕ್ಷಿಸುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಎಪ್ರಿಲ್ 23ರಿಂದ ಆನಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ನಿಗಮದ ವೆಬ್‌ಸೈಟ್: https://kmdconline.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 23-05-2025 ಆಗಿರುತ್ತದೆ.

ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಕಂಪ್ಯೂಟರ್‌ನಲ್ಲಿ ಭರ್ತಿ ಮಾಡಿದ ಕೂಡಲೇ ಅರ್ಜಿಯನ್ನು ಪ್ರಿಂಟ್‌ಔಟ್ ಪಡೆದು ಕ್ಯೂಆರ್ ಕೋಡ್ ಹೊಂದಿದ ಅರ್ಜಿಯೊಂದಿಗೆ ಜಾತಿ ಮತ್ತು ಆದಾಯ ಪ್ರಮಾಣಪತ್ರ, ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಪಿಯುಸಿ/ಡಿಪ್ಲೋಮಾ ಅಂಕಪಟ್ಟಿ, ಆಧಾರ್ ಕಾರ್ಡ್, 4 ಫೋ-ಟೋ, CET/NEET ಹಾಲ್ ಟಿಕೆಟ್ ಪ್ರತಿಗಳು ಹಾಗೂ ಇಂಡೆನ್ನಿಟಿ ಬಾಂಡ್, ಈ ಎಲ್ಲಾ ದಾಖಲಾತಿಗಳನ್ನು ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ಮೌಲಾನಾ ಆಜಾದ ಅಲ್ಪಸಂಖ್ಯಾತರ ಭವನ, 1ನೇ ಮಹಡಿ ಜಿಲ್ಲಾ ನ್ಯಾಯಲಯದ ಎದುರುಗಡೆ, ಹುಬ್ಬಳ್ಳಿ ರಸ್ತೆ-ಗದಗ ಈ ಕಛೇರಿಗೆ ಸಲ್ಲಿಸಲು ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08372-295147 ಸಂಪರ್ಕಿಸಬೇಕೆಂದು ಗದಗ ಜಿಲ್ಲಾ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರು ಕೋರಿದ್ದಾರೆ.

## ಚಾರಿತ್ರ್ಯವಂತರಾಗಿ ಬಾಳಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನೀವು ಕಾಲೇಜಿಗೆ ಬರುತ್ತಿರುವುದು ಅಧ್ಯಯನ ಮಾಡಿ ನಿಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು. ನಿಮ್ಮ ಗುರಿ ಅದಷ್ಟೇ ಆಗಿರಬೇಕೇ ಹೊರತು ಅನ್ಯ ಕಾರ್ಯಗಳತ್ತ ನಿಮ್ಮ ಮನಸ್ಸನ್ನು ಹರಿಬಿಟ್ಟರೆ ನೀವು ಜೀವನದಲ್ಲಿ ಖಂಡಿತ ಸೋಲುತ್ತೀರಿ. ನೀವೆಂದಿಗೂ ಜೀವನದಲ್ಲಿ ಸೋಲಬಾರದೆಂದು ನರೇಗಲ್ಲ ಠಾಣೆಯ ಪಿಎಸ್‌ಐ ಐಶ್ವರ್ಯ ನಾಗರಾಳ ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿ ಕಾಲೇಜಿನಲ್ಲಿ ಬುಧವಾರ ಏರ್ಪಡಿಸಲಾಗಿದ್ದ ಹೊಸ ಕಾನೂನುಗಳ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಿಮ್ಮ ತಂದೆ-ತಾಯಿ ನಿಮ್ಮ ಭವಿಷ್ಯದ ಬಗ್ಗೆ ಅದೆಷ್ಟೋ ಕನಸುಗಳನ್ನು ಕಟ್ಟಿಕೊಂಡಿರುತ್ತಾರೆ. ಅದಕ್ಕಾಗಿ ಅವರು ತಮ್ಮ ಜೀವನವನ್ನೇ ಒತ್ತೆ ಇಟ್ಟಿರುತ್ತಾರೆ. ನಮ್ಮ ಮಗ-ಮಗಳು ವಿದ್ಯಾಭ್ಯಾಸ ಕಲಿತು ದೊಡ್ಡ ನೌಕರಿ ಮಾಡುತ್ತಾರೆ, ಇದರಿಂದ ನಮ್ಮ ಬಾಳು ಬಂಗಾರವಾಗುತ್ತದೆ, ನಮ್ಮ ಬಡತನದ ಬದುಕು ದೂರಾಗುತ್ತದೆ ಎಂದು ನಂಬಿರುತ್ತಾರೆ. ಅಂತಹ ಸಮಯದಲ್ಲಿ ನೀವು ಪ್ರೀತಿ-ಪ್ರೇಮ ಎಂದೋ, ದುಶ್ಚಟಗಳಿಗೆ ಬಲಿಯಾಗಿಯೋ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುವುದಷ್ಟೇ ಅಲ್ಲ, ನರಕವನ್ನಾಗಿಸಿಕೊಳ್ಳುತ್ತಿರುವುದನ್ನು ಅನೇಕ ಸಂದರ್ಭಗಳಲ್ಲಿ ನಾವು ಕಾಣುತ್ತೇವೆ. ಆದ್ದರಿಂದ ನಿಮ್ಮ ಜೀವನದ ಗುರಿಯನ್ನು ಸಾಧಿಸಲು, ಜೀವನದಲ್ಲಿ ಉನ್ನತ ಸ್ಥಾನಗಳನ್ನು ಪಡೆಯಲು ಶ್ರದ್ಧೆಯಿಂದ ಪ್ರಯತ್ನಿಸಬೇಕೆಂದು ಹೇಳಿದರು.




ಈ ಸಂದರ್ಭದಲ್ಲಿ ಅವರು ಭಾರತೀಯ ನ್ಯಾಯ ಸಂಹಿತೆ, ಭಾರತೀಯ ನಾಗರಿಕ ಸುರಕ್ಷತಾ ಸಂಹಿತೆ ಮತ್ತು ಭಾರತೀಯ ಸಾಕ್ಷ್ಯ ಅಧಿನಿಯಮದ ಬಗ್ಗೆ ವಿದ್ಯಾರ್ಥಿಗಳಿಗೆ ತಿಳುವಳಿಕೆ ನೀಡಿದರು. ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಅಧ್ಯಕ್ಷತೆ ವಹಿಸಿದ್ದರು.

## ಪದವಿ ಶಿಕ್ಷಣಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಸಿದ್ದಾರ್ಥನಗರ-ಮೈಸೂರು ಸಂಸ್ಥೆಯಲ್ಲಿ ಬ್ಯಾಚುಲರ್ ಆಫ್ ವಿಜ್ಯುಯಲ್ ಆರ್ಟ್ಸ್ (ಬಿ.ವಿ.ಎ-ನಾಲ್ಕು ವರ್ಷದ ಎಂಟು ಸೆಮಿಸ್ಟರ್ ಎನ್.ಇ.ಪಿ. ಪದ್ಧತಿ) ದೃಶ್ಯಕಲೆಯಲ್ಲಿ 2025-26ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಬಿ.ವಿ.ಎ ಪದವಿ ಪ್ರವೇಶಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಸದರಿ ಪದವಿಯಲ್ಲಿ 3ನೇ ಸೆಮಿಸ್ಟರ್‌ನಿಂದ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್ ಕಲೆ (ಅಚ್ಚುಕಲೆ), ಅನ್ವಯಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಚಿತ್ರ ಪತ್ರಿಕೋದ್ಯಮ ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕ ಪದವಿಯಾಗಿರುತ್ತದೆ. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಂತರ್ಜಾಲ ವಿಳಾಸ htts;//uucms.karnataka.gov.in ಅಥವಾ https://www.cavamysore.karnataka.gov.in ಮೂಲಕವೇ ಅರ್ಜಿ ಸಲ್ಲಿಸಬೇಕು.


ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪ್ರವೇಶಾತಿಗಾಗಿ ಅರ್ಹತಾ ಪರೀಕ್ಷೆಯ ದಿನಾಂಕ ಮತ್ತು ಇತರೆ ಮಾಹಿತಿಯನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ಸಹಾಯವಾಣಿ 0821-2438931 ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ) ಡೀನ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## 'ಬಾಲಕೃಷ್ಣ ಸಾಹಿತ್ಯ ಪುರಸ್ಕಾರ' ಸಮಾರಂಭ ಎ.26ಕ್ಕೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಬಾಲಕೃಷ್ಣ ಸಾಹಿತ್ಯ ವೇದಿಕೆಯಿಂದ ನೀಡಲಾಗುವ 'ಬಾಲಕೃಷ್ಣ ಸಾಹಿತ್ಯ ಪುರಸ್ಕಾರ' ಸಮಾರಂಭವು ಎಪ್ರಿಲ್ 26ರಂದು ಬೆಳಿಗ್ಗೆ 10ಕ್ಕೆ ಶ್ರೀ ಅನ್ನದಾನೇಶ್ವರ ಪದವಿ ಕಾಲೇಜಿನ ಸಭಾಂಗಣದಲ್ಲಿ ಜರುಗಲಿದೆ ಎಂದು ವೇದಿಕೆಯ ಸಂಚಾಲಕ ಅರುಣ ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೇಂದ್ರೆ ದರ್ಶನ ಕಾರ್ಯಕ್ರಮದ ಮೂಲಕ ಬೇಂದ್ರೆ ಸಾಹಿತ್ಯವನ್ನು ನಾಡಿಗೆ ಪರಿಚಯಿಸುತ್ತಿರುವ ಧಾರವಾಡದ ಕಲಾವಿದ, ಬೇಂದ್ರೆ ಸಾಹಿತ್ಯ ಪರಿಚಾರಕ ಅನಂತ ಕೃಷ್ಣ ದೇಶಪಾಂಡೆ 2025ರ ಬಾಲಕೃಷ್ಣ ಸಾಹಿತ್ಯ ಪುರಸ್ಕಾರವನ್ನು ಪಡೆಯಲಿದ್ದಾರೆ. ಹಾಲಕೆರೆ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ವಹಿಸಿ, ಪುರಸ್ಕಾರ ಪ್ರದಾನ ಮಾಡಲಿದ್ದು, ಕೋಟುಮಚಗಿಯ ಶ್ರೀ ಸೋಮೇಶ್ವರ ಶಿಕ್ಷಣ ಸಮಿತಿಯ ಅಧ್ಯಕ್ಷ ಆರ್.ವ್ಹಿ. ಕುಲಕರ್ಣಿ ಅಧ್ಯಕ್ಷತೆ ವಹಿಸಲಿದ್ದಾರೆ.




ಸಾಹಿತಿ ಡಾ. ಶ್ಯಾಮಸುಂದರ ಬಿದರಕುಂದಿ ಸಮಾರಂಭವನ್ನು ಉದ್ಘಾಟಿಸಲಿದ್ದಾರೆ. ಗಾಯಕಿ ರಾಜಶ್ರೀ ಅರುಣ ಕುಲಕರ್ಣಿ ಸಂಗೀತ ಸೇವೆ ನೀಡಲಿದ್ದು, ಮಹೇಶ ಕಮ್ಮಾರ ಹಾರ್ಮೋನಿಯಂ ಹಾಗೂ ಶರಣಪ್ಪ ಅರಮನಿ ತಬಲಾ ಸಾಥ್ ನೀಡಲಿದ್ದಾರೆ. ಸಂಸ್ಥೆಯ ಆಡಳಿತಾಧಿಕಾರಿ ಎನ್. ಆರ್. ಗೌಡರ, ಗದಗ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಮತ್ತು ನರೇಗಲ್ಲ ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಈ ಸಂದರ್ಭದಲ್ಲಿ ತಮ್ಮ ರಂಗದಲ್ಲಿ ಸಾಧನೆಗೈದ ನಿವೃತ್ತ ಮುಖ್ಯ ಶಿಕ್ಷಕ ಶಿವನಗೌಡ ಗೌಡರ, ಹೆಸ್ಕಾಂನ ಎಸ್.ಎಚ್. ಭಜಂತ್ರಿ, ದಾನಿ ಮಲ್ಲಿಕಾರ್ಜುನ ಮೆಣಸಿಗಿ, ನಿವೃತ್ತ ಶಿಕ್ಷಕ ರಾಮಚಂದ್ರ ಮೋನೆ, ಎಂ.ಎ. ಕನ್ನಡದಲ್ಲಿ ಬಂಗಾರದ ಪದಕ ಪಡೆದ ಪೂಜಾ ಗ್ರಾಮಪುರೋಹಿತರನ್ನು ಸನ್ಮಾನಿಸಲಾಗುವುದು.

ಕಲಾವಿದ ಅನಂತ ದೇಶಪಾಂಡೆಯವರು ಬೇಂದ್ರೆಯವರ ಪಾತ್ರದಲ್ಲಿ ಸಾದರಪಡಿಸುವ ಬೇಂದ್ರೆ ದರ್ಶನ ಕಾರ್ಯಕ್ರಮವನ್ನು ಸವಿಯಲು ನರೇಗಲ್ಲ ಮತ್ತು ಸುತ್ತಲಿನ ಜನತೆ ಕಾತುರದಿಂದ ಕಾಯುತ್ತಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಡಾ. ರಾಜಕುಮಾರ್ ಕನ್ನಡ ಸಂಸ್ಕೃತಿಯ ಪ್ರತೀಕ

▸▸ ಮೊದಲನೇ ಪುಟದಿಂದ

ಗೌಡಪ್ಪ ಬೊಮ್ಮಪ್ಪನವರ ಮತ್ತು ತಂಡದವರು ಡಾ. ರಾಜಕುಮಾರ್ ಚಿತ್ರಗೀತೆಗಳ ಗಾಯನ ಪ್ರಸ್ತುತಪಡಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಗದಗ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕ ವೀರಯ್ಯಸ್ವಾಮಿ ಬಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ವಸಂತ ಮಡ್ಲೂರ ಸೇರಿ ವಿವಿಧ ಇಲಾಖೆಯ ಅಧಿಕಾರಿಗಳು, ಗಣ್ಯರು, ಮುಖಂಡರು ಹಾಜರಿದ್ದರು.

ಅಖಿಲ ಕರ್ನಾಟಕ ಡಾ. ರಾಜಕುಮಾರ ಅಭಿಮಾನಿಗಳ ಸಂಘಗಳ ಒಕ್ಕೂಟ, ಡಾ. ಶಿವರಾಜಕುಮಾರ ಅಭಿಮಾನಿಗಳ ಸಂಘ, ರಾಜರತ್ನ ಪುನೀತ್ ರಾಜಕುಮಾರ ಅಭಿಮಾನಿಗಳ ಸಂಘಗಳ ಒಕ್ಕೂಟದ ಜಿಲ್ಲಾಧ್ಯಕ್ಷ ವಿಠಲ್ ಪಿ.ಪರಾಪೂರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಸಂಗಾಪೂರ, ಉಪಾಧ್ಯಕ್ಷರಾದ ನಾಗರಾಜ ಎನ್.ಗುತ್ತಿ, ಖಜಾಂಚಿ ವಿನಾಯಕ ಗಜಕೋಶ್, ಶಹರ ಅಧ್ಯಕ್ಷ ಮಲ್ಲೇಶ ಪರಾಪೂರ, ಮಹಿಳಾ ಜಿಲ್ಲಾಧ್ಯಕ್ಷೆ ರೇಖಾ ಬಂಗಾರಶೆಟ್ಟರ, ಪ್ರಧಾನ ಕಾರ್ಯದರ್ಶಿ ಮೇಘನಾ ಎಮ್.ಕೊಟ್ಟೂರ ಸೇರಿದಂತೆ ಚಂದ್ರು ಚೌಹಾಣ, ಮಲ್ಲಿಕಾರ್ಜುನ ಖಂಡಮ್ಮನವರ ಹಾಗೂ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಡಾ. ರಾಜ್ ಕುಮಾರ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

### ನರೇಗಾ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ತಾ.ಪಂ ಇಓ ಆರ್.ವಿ. ದೊಡ್ಡಮನಿ ಕರೆ

## ಅಳತೆಗೆ ತಕ್ಕಂತೆ ಕೆಲಸ ಮಾಡಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಕೋಗನೂರ ಗ್ರಾ.ಪಂ ವ್ಯಾಪ್ತಿಯ ಗೋವನಕೊಪ್ಪ ಗ್ರಾಮದಲ್ಲಿ ಪ್ರಗತಿಯಲ್ಲಿರುವ ಹಳ್ಳದ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಆರ್.ವಿ. ದೊಡ್ಡಮನಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಂತರ ಅವರು ಮಾತನಾಡಿ, ನರೇಗಾ ಯೋಜನೆಯಡಿ ಉದ್ಯೋಗ ಖಾತರಿ ಕೂಲಿ ಮೊತ್ತ 2025ರ ಎಪ್ರಿಲ್ 1ರಿಂದ 349 ರಿಂದ 370 ರೂ.ಗೆ ಹೆಚ್ಚಳವಾಗಿದೆ. ಕೂಲಿಕಾರರು ಗ್ರಾಮ ಪಂಚಾಯಿತಿಗೆ ನಮೂನೆ 6ರಲ್ಲಿ ಕೆಲಸದ ಬೇಡಿಕೆ ಸಲ್ಲಿಸಿ, ಕೆಲಸ ಪಡೆಯಬೇಕು. ಉದ್ಯೋಗ ಖಾತರಿ ಯೋಜನೆಯಡಿ ನೋಂದಾಯಿತ ಕುಟುಂಬಕ್ಕೆ ವರ್ಷಕ್ಕೆ 100 ಮಾನವ ದಿನಗಳ



ಕೆಲಸ ಮಾಡಲು ಅವಕಾಶವಿದ್ದು, ಎಲ್ಲರೂ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಜಾಬ್ ಕಾರ್ಡ್ ಇಲ್ಲದೆ ಇರುವ ಕೂಲಿ ಕಾರ್ಮಿಕರು ತಕ್ಷಣವೇ ದಾಖಲಾತಿಗಳನ್ನು ನೀಡಿ ಹೊಸ ಜಾಬ್ ಕಾರ್ಡ್‌ಗಳನ್ನು ಪಡೆದುಕೊಂಡು ಯೋಜನೆಯ ಲಾಭವನ್ನು ಪಡೆಯಿರಿ ಎಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ, ಬೇಸಿಗೆಯ ಬಿಸಿಲು ಹೆಚ್ಚಾಗಿರುವುದರಿಂದ ಫಲಾನುಭವಿಗಳು ಆರೋಗ್ಯದ ಕಡೆ ಹೆಚ್ಚು ಗಮನ ಕೊಡಬೇಕು. ನಮ್ಮ ದೇಹದ ಆರೋಗ್ಯ ಬಹು ಮುಖ್ಯವಾಗಿದ್ದು, ಹೆಚ್ಚು ನೀರು ಕುಡಿಯಿರಿ, ನೀರನ್ನು ಕುದಿಸಿ ಆರಿಸಿ ಕುಡಿಯಿರಿ ಎಂದು ಸಲಹೆ ನೀಡಿದರು. ಕೆಲಸ ಪ್ರಾರಂಭವಾಗಿದೆ ಎಂದು ಎನ್ಎಂಆರ್‌ನಲ್ಲಿ ಹೆಸರು ಇಲ್ಲದೆ ಯಾವ ಕೂಲಿಕಾರರೂ

ಕೂಲಿಕಾರರ ಅಳತೆಗೆ ಅನುಸಾರವಾಗಿ ಕೂಲಿ ಪಾವತಿಯಾಗುತ್ತದೆ. ಅಳತೆಗೆ ತಕ್ಕಂತೆ ಕೆಲಸ ಮಾಡಬೇಕು. ಪ್ರತಿ ದಿನ ಎರಡು ಬಾರಿ ಹಾಜರಾತಿ ತೆಗೆದುಕೊಳ್ಳಲಾಗುತ್ತದೆ. ಕೂಲಿಕಾರರು ಎರಡೂ ಹಾಜರಾತಿಯಲ್ಲಿ ಕಡ್ಡಾಯವಾಗಿ ಪಾಲ್ಗೊಂಡು ಹಾಜರಾತಿ ಹಾಕಿಸಬೇಕು.

ಒಂದು ವೇಳೆ ಬೆಳಗಿನ ಹಾಜರಾತಿ ಹಾಕಿಸಿ ಮಧ್ಯಾಹ್ನದ ಹಾಜರಾತಿ ಹಾಕಿಸದಿದ್ದರೆ ತಮಗೆ ಆ ದಿನದ ಕೂಲಿ ಪಾವತಿಯಾಗುವುದಿಲ್ಲ ಎಂದು ಆರ್.ವಿ. ದೊಡ್ಡಮನಿ ತಿಳಿಸಿದರು.

ಕೆಲಸಕ್ಕೆ ಬರುವಂತಿಲ್ಲ. ಒಂದು ವೇಳೆ ಬಂದ ಸಂದರ್ಭದಲ್ಲಿ ಅವರಿಗೆ ಕೂಲಿ ಹಣ ಪಾವತಿಯಾಗುವುದಿಲ್ಲ. ಹಾಗಾಗಿ ಕೂಲಿಕಾರರು ಎನ್ಎಂಆರ್ ಹಾಕಿಸಿ ಕೆಲಸಕ್ಕೆ ಬರುವಂತೆ ಕೂಲಿಕಾರರಿಗೆ ಸೂಚಿಸಿದರು.

ಬೇಸಿಗೆಯಲ್ಲಿ ಅಂದರೆ ಎಪ್ರಿಲ್ ಮತ್ತು ಮೇ ತಿಂಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ ಕೆಲಸ ಇಲ್ಲದ ಕಾರಣ ನರೇಗಾ ಯೋಜನೆಯಡಿ ಕೆಲಸ ನೀಡಲಾಗುತ್ತದೆ. ಗ್ರಾಮೀಣ ಪ್ರದೇಶದ ಜನರು ಮತ್ತು ಕೂಲಿಕಾರರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನರೇಗಾ ಸಿಬ್ಬಂದಿಗಳು, ಗ್ರಾ.ಪಂ ಸಿಬ್ಬಂದಿಗಳು, ಕಾಯಕ ಬಂಧುಗಳು ಹಾಗೂ ಕೂಲಿಕಾರರು ಹಾಜರಿದ್ದರು.

## ಮನುಷ್ಯನಿಗೆ ಆರೋಗ್ಯ ಅತ್ಯಮೂಲ್ಯ

■ ವಿಜಯಸಾಕ್ಷಿ ಸುದ್ದಿ, ರೋಣ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ನರೇಗಾ) ಅಡಿಯಲ್ಲಿ ಕೆಲಸ ನಿರ್ವಹಿಸುವ ಕೂಲಿಕಾರರಿಗೆ ಆರೋಗ್ಯ ಕಾಳಜಿಯನ್ನು ಒದಗಿಸುವ ಉದ್ದೇಶದಿಂದ ಜಕ್ಕಲಿ ಗ್ರಾಮದ ಸಾಮೂಹಿಕ ಕಾಮಗಾರಿ ಸ್ಥಳದಲ್ಲಿ ಆರೋಗ್ಯ ಅಭಿಯಾನದಡಿ ಗ್ರಾಮ ಪಂಚಾಯತ ಜಕ್ಕಲಿ, ತಾಲೂಕು ಪಂಚಾಯತ ಹಾಗೂ ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ, ಪ್ರತಿಯೊಬ್ಬ ಮನುಷ್ಯನಿಗೂ ಆರೋಗ್ಯವೇ ಅಮೂಲ್ಯ. ಜಗತ್ತಿನಲ್ಲಿ ಹಣ ಕೊಟ್ಟರೆ ಏನಾದರೂ ಸಿಗುತ್ತದೆ, ಆದರೆ ಆರೋಗ್ಯ ಸಿಗುವದಿಲ್ಲ. ಈ ಶಿಬಿರವು ಕೂಲಿಕಾರರ ಆರೋಗ್ಯದ ದೃಷ್ಟಿಯನ್ನು ಇಟ್ಟುಕೊಂಡು



ಮಾಡಲಾಗಿದೆ. ಇಂತಹ ಶಿಬಿರಗಳು ಗ್ರಾಮೀಣ ಜನರ ಆರೋಗ್ಯವನ್ನು ಸುಧಾರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಮುಂದಿನ ದಿನಗಳಲ್ಲಿಯೂ ಇಂತಹ ಆರೋಗ್ಯ ಶಿಬಿರಗಳನ್ನು ತಾಲೂಕಿನ ಪ್ರತಿ ಗ್ರಾಮ ಪಂಚಾಯಿತಿ ಕೆಲಸದ ಸ್ಥಳಗಳಲ್ಲಿ ಆಯೋಜಿಸುವ ಯೋಜನೆಯನ್ನು ಹೊಂದಲಾಗಿದೆ ಎಂದರು.

ಶಿಬಿರದಲ್ಲಿ ಗ್ರಾ.ಪಂ ಅಧ್ಯಕ್ಷರಾದ ಗಂಗಮ್ಮ, ಉಪಾಧ್ಯಕ್ಷರಾದ ಯಲ್ಲವ್ವ ಮಾದರ, ಸರ್ವ ಸದಸ್ಯರು, ಆರೋಗ್ಯ ಇಲಾಖೆ ಅಧಿಕಾರಿಗಳಾದ ಸಂತೋಷ ರಾಠೋಡ, ಸಂತೋಷ ಬಳಿಗಾರ, ಆರೋಗ್ಯ ಇಲಾಖೆಯ ಸಿಬ್ಬಂದಿಗಳು, ಗ್ರಾ.ಪಂ ಪಿಡಿಓ ಶಿವಯೋಗಿ ರಿತ್ತಿ ಸೇರಿದಂತೆ ತಾ.ಪಂ ಹಾಗೂ ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

ಶಿಬಿರದಲ್ಲಿ ರಕ್ತದೊತ್ತಡ, ಮಧುಮೇಹ, ರಕ್ತಹೀನತೆ, ಕಣ್ಣಿನ ತಪಾಸಣೆ, ಹಾಗೂ ಸಾಮಾನ್ಯ ಆರೋಗ್ಯ ತಪಾಸಣೆಗಳನ್ನು ನಡೆಸಲಾಯಿತು. ವಿಶೇಷವಾಗಿ ಗರ್ಭಿಣಿಯರ ಆರೋಗ್ಯ ತಪಾಸಣೆ ಮತ್ತು ಸಲಹೆಯನ್ನು ಒದಗಿಸಲಾಯಿತು. ತಪಾಸಣೆಯ ನಂತರ, ಅಗತ್ಯವಿರುವ ರೋಗಿಗಳಿಗೆ ಉಚಿತ ಔಷಧಿಗಳನ್ನು ವಿತರಿಸಲಾಯಿತು ಹಾಗೂ ಮುಂದಿನ ಚಿಕಿತ್ಸೆಗೆ ಸೂಕ್ತ ಸಲಹೆ ನೀಡಲಾಯಿತು.

## ಉಗ್ರರ ಕೃತ್ಯಕ್ಕೆ ಸದ್ಯದಲ್ಲೇ ಪ್ರತ್ಯುತ್ತರ

■ ವಿಜಯಸಾಕ್ಷಿ ಸುದ್ದಿ, ಗದಗ

ಜಮ್ಮು ಕಾಶ್ಮೀರದ ಪಹಲ್ಗಾಮ್ ಜಿಲ್ಲೆಯಲ್ಲಿ ಕನ್ನಡಿಗರೂ ಸೇರಿ 26 ಜನ ಪ್ರವಾಸಿಗರನ್ನು ಅಮಾನುಷವಾಗಿ ಕೊಂದಿರುವ ಉಗ್ರರ ನಡೆ ಭೀಕರ ಹಾಗೂ ಖಂಡನೀಯವಾಗಿದ್ದು, ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಇದಕ್ಕೆ ಸದ್ಯದಲ್ಲೇ ತಕ್ಕ ಪ್ರತ್ಯುತ್ತರ ನೀಡಲಿದೆ ಎಂದು ಬಿಜೆಪಿ ಮುಖಂಡ ವಿಜಯಕುಮಾರ ಗಡ್ಡಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಈ ಹಿಂದೆ ಪುಲ್ವಾಮಾ ದಾಳಿಗೆ ಪ್ರತ್ಯುತ್ತರವಾಗಿ



ನಡೆಸಿದ ಬಾಲಾಕೋಟ್ ವಾಯುದಾಳಿಯಿಂದ ಪಾಕ್ ಹಾಗೂ ಉಗ್ರನೆಲೆಗಳು ಮರ್ಮಾಘಾತ ಅನುಭವಿಸಿದ್ದವು. ಅದಾದ ನಂತರ ಗಡಿ ಭಾಗದಲ್ಲಿ ಭಯೋತ್ಪಾದಕ ಚಟುವಟಿಕೆಗಳು ಗಣನೀಯವಾಗಿ ಕ್ಷೀಣಿಸಿದ್ದು ಎಲ್ಲರಿಗೂ ಗೊತ್ತಿದೆ.

ಉಗ್ರ ಸಂಘಟನೆಗಳು ತಾವು ಕಲಿತ ಪಾಠವನ್ನು ಮರೆತು ಮತ್ತೆ ಇಂಥ ಹೇಯ ಕೃತ್ಯಕ್ಕೆ ತೊಡಗಿದ್ದು, ಪಾಕಿಸ್ಥಾನ ತಾನು ಆರ್ಥಿಕವಾಗಿ ಬಳಲಿಹೋಗಿದ್ದರೂ ಇಂಥ ಅಮಾನವೀಯ ಕೃತ್ಯಗಳಿಗೆ ಪ್ರೋತ್ಸಾಹ ನೀಡುವುದನ್ನು ಬಿಟ್ಟಿಲ್ಲ. ಪ್ರಧಾನಿ ಮೋದಿಯವರು ಬಿಹಾರದಲ್ಲಿ ನಡೆದ ಸಮಾರಂಭದಲ್ಲಿ ಒಬ್ಬೊಬ್ಬ ಉಗ್ರರನ್ನೂ ಹೊಡೆದುರುಳಿಸುತ್ತೇವೆ, ಊಹೆಗೂ ನಿಲುಕದ ಉತ್ತರ ನೀಡುತ್ತೇವೆ ಎಂದು ದಿಟ್ಟ ಸಂದೇಶ ನೀಡಿದ್ದು, ಮತ್ತೊಮ್ಮೆ ಕೇಂದ್ರ ಸರ್ಕಾರ ದುಷ್ಟರ ದಮನ ಮಾಡಲಿದೆ ಎಂದಿದ್ದಾರೆ.

## ಮಾನನಷ್ಟ ಪ್ರಕರಣ: ಮೇಧಾ ಪಾಟ್ಕರ್ ವಿರುದ್ಧ ಜಾಮೀನು ರಹಿತ ವಾರಂಟ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿಯ ಹಾಲಿ ಲೆಫ್ಟಿನೆಂಟ್ ಗವರ್ನರ್ (ಎಲ್–ಜಿ) ವಿ.ಕೆ ಸಕ್ಸೇನಾ ಅವರು ಹೂಡಿರುವ 24 ವರ್ಷಗಳ ಹಿಂದಿನ ಮಾನನಷ್ಟ ಮೊಕದ್ದಮೆಗೆ ಸಂಬಂಧಿಸಿದ ಪ್ರೊಬೇಷನ್ ಬಾಂಡ್‌ಗಳನ್ನು ಸಲ್ಲಿಸದ ಕಾರಣ ಸಾಮಾಜಿಕ ಕಾರ್ಯಕರ್ತೆ ಮೇಧಾ ಪಾಟ್ಕರ್ ವಿರುದ್ಧ ದೆಹಲಿ ನ್ಯಾಯಾಲಯವು ಬುಧವಾರ (ಏ.23) ಜಾಮೀನು ರಹಿತ ವಾರೆಂಟ್ ಹೊರಡಿಸಿದೆ.

ಪ್ರಕರಣಕ್ಕೆ ಸಂಬಂಧಿಸಿದ ಪ್ರೊಬೇಷನ್ ಬಾಂಡ್ ಜಾರಿಗೊಳಿಸುವ ಪ್ರಕ್ರಿಯೆಗೆ ಎರಡು ವಾರಗಳ ತಡೆ ನೀಡಬೇಕೆಂಬ ಪಾಟ್ಕರ್ ಅವರ ಮನವಿಯನ್ನು ದೆಹಲಿ ಹೈಕೋರ್ಟ್ ಮಂಗಳವಾರ (ಏ.22) ತಿರಸ್ಕರಿಸಿತ್ತು.



ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಗುರುವಾರ ತಾಲೂಕಿನ ಮುಕ್ತಿಮಂದಿರದ ಧರ್ಮ ಕ್ಷೇತ್ರದಲ್ಲಿ ಲಿಂ. ವೀರಗಂಗಾಧರ ಜಗದ್ಗುರುಗಳ ಕೃರ್ತ್ಯ ಗದ್ದುಗೆಗೆ ಪೂಜೆ ಸಲ್ಲಿಸಿದರು. ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು, ನರೇಗಲ್ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಉಪಸ್ಥಿತರಿದ್ದರು.




ಲಕ್ಕುಂಡಿಯ ಇಲ್ಲಿಯ ಅಲ್ಲಮಪ್ರಭುದೇವರ ರಥೋತ್ಸವದ ಅಂಗವಾಗಿ ಮಹಿಳೆಯರಿಂದ ಪೂರ್ಣ ಕುಂಭ ಮೆರವಣಿಗೆ ಸಂಭ್ರಮದಿಂದ ಜರುಗಿತು. ಅಲ್ಲಮಪ್ರಭುದೇವರ ಮಠದಿಂದ ಸಾಗಿದ ಕುಂಭ ಹಾಗೂ ಅಡ್ಡಪಲ್ಲಕ್ಕಿಯ ಮೆರವಣಿಗೆಯು ಗ್ರಾಮದ ಪ್ರಮುಖ ಬೀದಿಯಲ್ಲಿ ಡೊಳ್ಳು ವಾದ್ಯದೊಂದಿಗೆ ನಡೆಯಿತು.

### ಸೊರಟೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ

## ಶತಮಾನೋತ್ಸವ ಕಾರ್ಯಕ್ರಮ ಏ.26ಕ್ಕೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮೀಪದ ಸೊರಟೂರ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಶತಮಾನೋತ್ಸವ ಎಪ್ರಿಲ್ 26ರಂದು ಬೆಳಿಗ್ಗೆ 10 ಗಂಟೆಗೆ ಸಂಘದ ಮುಂಭಾಗದಲ್ಲಿರುವ ನಾರಾಯಣಶಾಸ್ತ್ರಿ ಪುರಾಣಿಕರವರ ಜಮೀನಿನಲ್ಲಿ ಜರುಗಲಿದೆ ಎಂದು ಸಂಘದ ಅಧ್ಯಕ್ಷ ಎಂ.ಎಫ್. ಕಲಗುಡಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಕಾರ್ಯಕ್ರಮದ ಪಾವನ ಸಾನ್ನಿಧ್ಯವನ್ನು ಸೊರಟೂರ ಜಗದ್ಗುರು ಅನ್ನದಾನೇಶ್ವರ ಶಾಖಾಮಠದ ಶಿವಯೋಗೀಶ್ವರ ಮಾಹಾಸ್ವಾಮಿಗಳು ವಹಿಸಿಕೊಳ್ಳುವರು. ಘನ ಉಪಸ್ಥಿತಿಯನ್ನು ಸಭಾಪತಿ ಬಸವರಾಜ ಹೊರಟ್ಟಿ ವಹಿಸಲಿದ್ದು, ಸಹಕಾರ ಧ್ವಜಾರೋಹಣವನ್ನು




ಸಹಕಾರಿ ಸಚಿವ ಕೆ.ಎನ್. ರಾಜಣ್ಣ ನೆರವೇರಿಸುವರು. ಉದ್ಘಾಟನೆಯನ್ನು ಸಚಿವ ಡಾ. ಎಚ್.ಕೆ. ಪಾಟೀಲ ನೆರವೇರಿಸುವರು. ಸ್ಮರಣ ಸಂಚಿಕೆ ಬಿಡುಗಡೆಯನ್ನು ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಸಂಸದರಾದ ಬಸವರಾಜ ಬೊಮ್ಮಾಯಿ, ಅಧ್ಯಕ್ಷತೆಯನ್ನು ಸೊರಟೂರ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಎಂ.ಎಫ್. ಕಲಗುಡಿ ವಹಿಸುವರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ರೋಣ ಶಾಸಕ ಜಿ.ಎಸ್. ಪಾಟೀಲ್, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಸಹಕಾರಿ ಸಚಿವ ಎಸ್. ಎಸ್. ಪಾಟೀಲ್, ಮಾಜಿ ಶಾಸಕ ಡಿ.ಆರ್. ಪಾಟೀಲ್, ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ, ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ. ದೇವೇಗೌಡ, ವಿಧಾನ ಪರಿಷತ್ ಸದಸ್ಯ ಪ್ರದೀಪ ಶೆಟ್ಟರ, ನರಗುಂದ ಶಾಸಕ ಸಿ.ಸಿ. ಪಾಟೀಲ್, ಗ್ರಾ.ಪಂ ಅಧ್ಯಕ್ಷ ಚಂದ್ರಮ್ಮ ಓಂಕಾರಿ ಹಾಗೂ ಸೊರಟೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಉಪಾಧ್ಯಕ್ಷ ಪಿ.ವಾಯ್. ಮಲ್ಲಾರಿ ಹಾಗೂ ಸರ್ವ ನಿರ್ದೇಶಕ ಮಂಡಳಿ ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸುವರು.

ನಾಗಾವಿ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಬಿ.ಆರ್. ದೇವರೆಡ್ಡಿ ಹಾಗೂ ಜಿಲ್ಲಾ ಪಂಚಾಯಿತಿ ಸ್ವಚ್ಛ ಭಾರತ ಮಿಷನ್ ಸಮಾಲೋಚಕ ಎಚ್.ಎಫ್. ಕುಸಣ್ಣವರ ಇವರನ್ನು ಸನ್ಮಾನಿಸಲಾಗುವುದು.

## ಅಲ್ಲಮಪ್ರಭುದೇವರ ರಥೋತ್ಸವ ಇಂದು

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಲಿಂಗೈಕ್ಯ ಬಸವರಾಜೇಂದ್ರ ಮಹಾಸ್ವಾಮಿಗಳ 13ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಇಲ್ಲಿಯ ಅಲ್ಲಮಪ್ರಭುದೇವರ ಮಠದ ರಥೋತ್ಸವವು ಶುಕ್ರವಾರ ಸಂಜೆ 4.45ಕ್ಕೆ ಜರುಗಲಿದೆ.

ಹರ್ಲಾಪೂರದ ಡಾ. ಕೊಟ್ಟೂರೇಶ್ವರ ಶ್ರೀಗಳು, ಶ್ರೀಮಠದ ಸಿದ್ಧಲಿಂಗೇಶ್ವರ ಶ್ರೀಗಳು, ಹೊಸರಿತ್ತಿಯ ಗುದ್ದಲೀಶ್ವರ ಶ್ರೀಗಳು, ಸೊರಟೂರ ವಿರಕ್ತಮಠದ ಶಿವಯೋಗೇಶ್ವರ ಶ್ರೀಗಳು, ಕಲ್ಮಠದ ಗುರುಸಿದ್ಧ ಶ್ರೀಗಳು, ಹಂಪಸಾಗರದ



ನವಲಿ ಹಿರೇಮಠದ ಶಿವಲಿಂಗ ರುದ್ರಮುನಿ ಶ್ರೀಗಳು ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಪೂಜೆ ಸಲ್ಲಿಸಿ ರಥಕ್ಕೆ ಚಾಲನೆ ನೀಡುವರು.

ಶ್ರೀ ಮಠದಿಂದ ಚೌಕಿಮಠದವರೆಗೂ ರಥವು ಸಾಗುವುದು. ಇದಕ್ಕೂ ಪೂರ್ವ ಬೆಳಿಗ್ಗೆ ಬಸವರಾಜೇಂದ್ರ ಮಹಾಸ್ವಾಮಿಗಳ ಗದ್ದುಗೆಗೆ ಅಭಿಷೇಕ, ವಿಶೇಷ ಪೂಜಾ ಕೈಂಕರ್ಯಗಳು ಜರುಗುವವು. 11.45ಕ್ಕೆ ಸಾಮೂಹಿಕ ವಿವಾಹಗಳು ಜರುಗುವವು. ರಾತ್ರಿ ಅಲ್ಲಮಪ್ರಭುದೇವರ ಸೇವಾ ಸಮಿತಿ ಆಶ್ರಯದಲ್ಲಿ ಮನರಂಜನಾ ಕಾರ್ಯಕ್ರಮಗಳು ನಡೆಯಲಿವೆ. ಏ.26ರಂದು ಸಂಜೆ ಲಘು ರಥೋತ್ಸವ ನೆರವೇರುವುದು ಎಂದು ಪ್ರಕಟಣೆ ತಿಳಿಸಿದೆ.

## ಪಹಲ್ಗಾಮ್ ಭದ್ರತಾ ಲೋಪದ ಬಗ್ಗೆ ಪ್ರಶ್ನೆ ಕೇಳಿದ ಪತ್ರಕರ್ತನ ಮೇಲೆ ಹಲ್ಲೆ

■ ವಿಜಯಸಾಕ್ಷಿ ಸುದ್ದಿ, ಜಮ್ಮು ಕಾಶ್ಮೀರ


ಜಮ್ಮು ಕಾಶ್ಮೀರದ ಕಥುವಾ ಜಿಲ್ಲೆಯಲ್ಲಿ ಬುಧವಾರ ನಡೆದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಕುರಿತು ಬಿಜೆಪಿ ಪ್ರತಿಭಟನೆಯನ್ನು ವರದಿ ಮಾಡುವಾಗ ಹಿರಿಯ ಪತ್ರಕರ್ತರೊಬ್ಬರ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ಆರೋಪಿಸಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಪಹಲ್ಗಾಮ್ ಭದ್ರತಾ ಲೋಪದ ಬಗ್ಗೆ ಪ್ರಶ್ನೆ ಕೇಳಿದ್ದಕ್ಕಾಗಿ ಅವರ ಮೇಲೆ ಬಿಜೆಪಿ ದುಷ್ಕರ್ಮಿಗಳು ಹಲ್ಲೆ ನಡೆಸಿದ್ದಾರೆ ಎಂದು ವರದಿಗಳು ಹೇಳಿವೆ. ಕಾಲಿಬರಿ ಚೌಕ್‌ನಲ್ಲಿ ದೈನಿಕ್ ಜಾಗರಣ್ ವರದಿಗಾರ ರಾಕೇಶ್ ಶರ್ಮಾ ಅವರ ಮೇಲೆ ಬಿಜೆಪಿಯ ದುಷ್ಕರ್ಮಿಗಳು ದಾಳಿ ಮಾಡಿದ್ದಾರೆ ಎಂದು ವರದಿಯಾಗಿದೆ.

## ರಕ್ತಪಿಪಾಸು ಉಗ್ರರ ಹುಟ್ಟಡಗಿಸಬೇಕು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭೂಲೋಕದ ಸ್ವರ್ಗ ಕಾಶ್ಮೀರದ ಪೆಹಲ್ಗಾಮ್‌ದಲ್ಲಿ ಪ್ರವಾಸಕ್ಕೆ ತೆರಳಿದ ಹಿಂದೂಗಳನ್ನು ಧರ್ಮಾಧಾರಿತವಾಗಿ ಆಯ್ಕೆ ಮಾಡಿ ಮಡದಿ–ಮಕ್ಕಳ ಮುಂದೆಯೇ ಹತ್ಯೆ ಮಾಡಿರುವುದು ಅತ್ಯಂತ ಘೋರ ಭಯೋತ್ಪಾದಕ ಕೃತ್ಯ. ಈ ಕೃತ್ಯ ಎಸಗಿದ ರಕ್ತಪಿಪಾಸು ಉಗ್ರರ ಅಟ್ಟಹಾಸಕ್ಕೆ ತಕ್ಕ ಶಿಕ್ಷೆಯಾಗಬೇಕು ಎಂದು ಶಿಗ್ಲಿಯ ಹಿರಿಯ ಮುಖಂಡ, ಧರ್ಮಾಭಿಮಾನಿ ವೀರಣ್ಣ ಪವಾಡದ ಆಗ್ರಹಿಸಿದ್ದಾರೆ.

ಈ ಬಗ್ಗೆ ಅವರು ಪತ್ರಿಕಾ ಹೇಳಿಕೆ ನೀಡಿ, ಹಿಂದೂಗಳ



ದೇಶ ಭಾರತದಲ್ಲಿಯೇ ಇಂತಹ ಪರಿಸ್ಥಿತಿ ನಿರ್ಮಾಣವಾಗಿರುವುದು ಮುಂದಿನ ಕರಾಳ ಭವಿಷ್ಯವನ್ನು ಸೂಚಿಸಿದಂತಿದೆ. ಈ ಉಗ್ರ ಕೃತ್ಯವನ್ನು ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಗಂಭೀರವಾಗಿ ತೆಗೆದುಕೊಳ್ಳಬೇಕು. ದೇಶದ ಭವಿಷ್ಯದ ದೃಷ್ಟಿಯಿಂದ ಇಂತಹ ಘಟನೆಗಳು ಮರುಕಳಿಸದಂತೆ ಎಲ್ಲ ಪಕ್ಷಗಳು ಕೇಂದ್ರದ ನಿರ್ಣಯ–ಕ್ಕೆ ಬೆಂಬಲ ಸೂಚಿಸಬೇಕು. ಈ ಘಟನೆಗೆ ಕಾರಣವಾದವರ ಹುಟ್ಟಡಗಿಸಬೇಕು. ಶತ್ರು ರಾಷ್ಟ್ರಗಳ ಕೈವಾಡ ಇದ್ದಲ್ಲಿ ದೇಶದ ಸೇನಾ ಶಕ್ತಿಯನ್ನು ಬಳಸಿ ತಕ್ಕ ಉತ್ತರ ನೀಡಬೇಕು. ನೊಂದ ಕುಟುಂಬದ ಜೊತೆ–ಗೆ ಇಡೀ ದೇಶದ ಜನತೆ ನಿಲ್ಲಬೇಕು ಎಂದು ವೀರಣ್ಣ ಪವಾಡದ ತಿಳಿಸಿದ್ದಾರೆ.

## ಎ.ಎಸ್. ಮಕಾನದಾರರಿಗೆ 'ಸರ್ವೋತ್ತಮ ಸೇವಾ ಪುರಸ್ಕಾರ'

■ ವಿಜಯಸಾಕ್ಷಿ ಸುದ್ದಿ, ಗದಗ

ಹಿರಿಯ ಪ್ರಧಾನ/ಸಿಜೆಎಂ ನ್ಯಾಯಾಲಯದಲ್ಲಿ ಪ್ರಥಮ ದರ್ಜೆ ಸಹಾಯಕರಾಗಿ ಕಾರ್ಯ ನಿರ್ವಹಿಸುತ್ತಿರುವ ಹಿರಿಯ ಸಾಹಿತಿ ಎ.ಎಸ್. ಮಕಾನದಾರರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಸರ್ಕಾರದ ಮುಖ್ಯ ಸಚೇತಕ ಅಶೋಕ ಪಟ್ಟಣದ, ಶಾಸಕ ರಿಜ್ವಾನ್ ಹರ್ಷದ ಮುಂತಾದ ಗಣ್ಯರ ಸಮ್ಮುಖದಲ್ಲಿ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನ ಸಭಾಂಗಣದಲ್ಲಿ ಏರ್ಪಡಿಸಿದ್ದ






ಕಾರ್ಯಕ್ರಮದಲ್ಲಿ ರಾಜ್ಯ ಮಟ್ಟದ 'ಸರ್ವೋತ್ತಮ ಸೇವಾ ಪುರಸ್ಕಾರ' ಪ್ರದಾನ ಮಾಡಿದರು.

2012ರಿಂದ ಮಾನ್ಯ ಕರ್ನಾಟಕ ಸರ್ಕಾರ ಜಿಲ್ಲಾ ಸರ್ವೋತ್ತಮ ಸೇವಾ ಪುರಸ್ಕಾರ ಮತ್ತು ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪುರಸ್ಕಾರ ನೀಡುವ ಯೋಜನೆ ಜಾರಿಗೆ ತಂದಿದ್ದು, ರಾಜ್ಯದಲ್ಲಿಯೇ ಮೊಟ್ಟಮೊದಲ ಬಾರಿಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಗೆ ಮಕಾನದಾರ ಭಾಜನರಾಗಿದ್ದು, ನ್ಯಾಯಾಂಗ ಇಲಾಖೆಯ ಇತಿಹಾಸದಲ್ಲಿಯೇ ಇಲಾಖಾವಾರು ರಾಜ್ಯ ಮಟ್ಟದ ಪುರಸ್ಕಾರಕ್ಕೂ ಭಾಜನರಾಗಿದ್ದಕ್ಕೆ ಇಲಾಖೆಗೆ ವಿಶೇಷ ಗರಿ ಮೂಡಿದಂತಾಗಿದೆ.

ಮಾನ್ಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಅಧೀನ ನ್ಯಾಯಾಲಯಗಳ ನ್ಯಾಯಧೀಶರು, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು, ನ್ಯಾಯಾಂಗ ಇಲಾಖೆಯ ಸಹೋದ್ಯೋಗಿ ಮಿತ್ರರು, ಗದಗ ಜಿಲ್ಲೆಯ ಸಾಹಿತಿ ಮಿತ್ರರ ಸಹಕಾರ, ಇಲಾಖೆಯ ಹಿರಿಯ ಅಧಿಕಾರಿಗಳು ಮಾರ್ಗದರ್ಶನವೇ ಈ ಪುರಸ್ಕಾರಕ್ಕೆ ಮುಖ್ಯ ಕಾರಣವೆಂಬುದು ಸಾಹಿತಿ ಮಕಾನದಾರರ ಅಭಿಮತ.

ಗದಗ ಜಿಲ್ಲಾ ನ್ಯಾಯಾಂಗ ಇಲಾಖೆಯ ನೌಕರರ ಸಂಘ ಮತ್ತು ಜಿಲ್ಲಾ ನೌಕರರ ಸಹಕಾರಿ ಪತ್ತಿನ ಸಂಘದ ಪದಾಧಿಕಾರಿಗಳು ಪ್ರಶಸ್ತಿ ಪುರಸ್ಕೃತ ಮಕಾನದಾರರಿಗೆ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಉಗ್ರರ ಕೃತ್ಯಕ್ಕೆ ರಂಭಾಪುರಿ ಶ್ರೀ ಖಂಡನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಭಯೋತ್ಪಾದಕರನ್ನು ಸದೆಬಡಿಯಲು ಕೇಂದ್ರ ಸರಕಾರ ಕಠಿಣ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಬಾಳೆಹೊನ್ನೂರ ಶ್ರೀ ರಂಭಾಪುರಿ ವೀರಸೋಮೇಶ್ವರ ಜಗದ್ಗುರುಗಳು ಆಗ್ರಹಿಸಿದ್ದಾರೆ.

ಅವರು ಪಟ್ಟಣದ ಚನ್ನಬಸಯ್ಯ ಬಾಳಿಹಳ್ಳಿಮಠ ಕಲ್ಯಾಣಮಂಟಪದಲ್ಲಿ ನಡೆದ ಖಾಸಗಿ ಕಾರ್ಯಕ್ರಮಕ್ಕೆ ಆಗಮಿಸಿದ ಸಂದರ್ಭದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ, ಕಾಶ್ಮೀರದಲ್ಲಿ ಹಿಂದೂಗಳ ಹಾಗೂ ವಿದೇಶಿ ಪ್ರಜೆಗಳ ಹತ್ಯೆ ನಡೆದಿದ್ದು ಅಮಾನವೀಯ ಘಟನೆ.

ಭಾರತ ದೇಶದ ಅವಿಭಾಜ್ಯ ಅಂಗ ಜಮ್ಮು ಕಾಶ್ಮೀರದಲ್ಲಿ ಇತ್ತೀಚೆಗೆ ನರೇಂದ್ರಮೋದಿ ನೇತೃತ್ವದ ಕೇಂದ್ರ ಸರಕಾರ 360 ಆರ್ಟಿಕಲ್ ರದ್ದು ಮಾಡಿ ಅಲ್ಲಿ ಒಳ್ಳೆಯ ಆಡಳಿತ ನಡೆಸಲು ಪ್ರಯತ್ನ ಮಾಡಿದ್ದಾರೆ.

ಅದಕ್ಕೆ ಅಲ್ಲಿಯ ಜನರೂ ಸ್ಪಂದಿಸಿದ್ದಾರೆ. ಆದರೆ ಕೆಲವು ಇಸ್ಲಾಮಿಕ್ ಭಯೋತ್ಪಾದಕರು ಹಿಂದೂಗಳ ಮೇಲೆ ಏಕಾಏಕಿ ಗುಂಡು ಹಾರಿಸಿ ಕೊಲೆ ಮಾಡಿದ್ದು ಖಂಡನೀಯವಾಗಿದೆ.

ದೇಶದ ಎಲ್ಲಾ ಜನರಿಗೆ ಈ ಘಟನೆ ಆಘಾತ ಉಂಟುಮಾಡಿದೆ. ಮುಂದಿನ ದಿನಮಾನಗಳಲ್ಲಿ ಜಮ್ಮು-ಕಾಶ್ಮೀರದಲ್ಲಿ ಹೆಚ್ಚಿನ ಭದ್ರತೆ ಒದಗಿಸಬೇಕು ಎಂದು ಪ್ರತಿಕ್ರಿಯಿಸಿದ್ದಾರೆ.

### ಸಮುದಾಯ ಬದು ನಿರ್ಮಾಣ ಕಾಮಗಾರಿಯ ಯಶಸ್ಸು | ರೈತರ ಮೊಗದಲ್ಲಿ ಸಂತಸ

# ಜಮೀನಿನ ಫಲವತ್ತತೆ ಹೆಚ್ಚಳ ಖಾತ್ರಿ

■ವಿಜಯಸಾಕ್ಷಿ ಸುದ್ದಿ, ಗದಗ



ತಾಲೂಕಿನ ಬಹುಪಾಲು ರೈತರ ಜಮೀನುಗಳಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕಂದಕ ಬದು ನಿರ್ಮಾಣ ಮಾಡಲಾಗುತ್ತಿದೆ. ಇತ್ತೀಚೆಗೆ ಕೆಲವು ಗ್ರಾಮಗಳಲ್ಲಿ ಸುರಿದ ಸುರಿದ ಮಳೆಗೆ ಕಂದಕಗಳಲ್ಲಿ ನೀರು ತುಂಬಿಕೊಂಡಿರುವುದು ಯೋಜನೆಗೆ ಶ್ರಮಿಸಿದ ರೈತರ ಮೊಗದಲ್ಲಿ ಸಂತಸ ಚಿಮ್ಮುವಂತೆ ಮಾಡಿದೆ.

ಉದ್ಯೋಗ ಖಾತ್ರಿ ಯೋಜನೆ ಗ್ರಾಮೀಣ ಜನರ ಅಭಿವೃದ್ಧಿಗೆ ಇರುವ ಪ್ರಮುಖ ಯೋಜನೆಯಾಗಿದೆ. ಇದು ರೈತರಿಗೆ ವರದಾನವಾಗುವುದರ ಜೊತೆಗೆ ಜಮೀನಿನ ಫಲವತ್ತತೆ ಹೆಚ್ಚಳಕ್ಕೆ ಪೂರಕವಾಗಿದೆ. ಇದರಲ್ಲಿ ಗ್ರಾಮೀಣರು ವೈಯಕ್ತಿಕ ಕಾಮಗಾರಿಗಳ ಮೂಲಕ ತಮ್ಮ ಜಮೀನಿನಲ್ಲಿ ವಿವಿಧ ಅರಣ್ಯ, ತೋಟಗಾರಿಕೆ, ರೇಷ್ಮೆ ಬೆಳೆ ಬೆಳೆಯಬಹುದು. ಇಲ್ಲವೇ ಸಮುದಾಯ ಕಾಮಗಾರಿಯಲ್ಲಿ ಪಾಲ್ಗೊಂಡು ದಿನಕ್ಕೆ 370 ರೂ. ಕೂಲಿ ಪಡೆಯಬಹುದಾಗಿದೆ.

ಗದಗ ತಾಲೂಕು ಪಂಚಾಯಿತಿ ವ್ಯಾಪ್ತಿಯ ಅಡವಿಸೋಮಾಪುರ, ಬಿಂಕದಕಟ್ಟಿ, ಕುರ್ತಕೋಟಿ, ಲಕ್ಕುಂಡಿ, ಬೆಳಹೋಡ, ಅಂತೂರ, ಬಳಗಾನೂರ, ಹರ್ಲಾಪೂರ, ತಿಮ್ಮಾಪುರ, ಹುಯಿಲಗೋಳ, ಹುಲಕೋಟಿ, ಕದಡಿ, ನಾಗಾವಿ, ಬೆಳದಡಿ ಸೇರಿ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಸಮುದಾಯ ಬದು ನಿರ್ಮಾಣ ಕಾಮಗಾರಿಗಳು ಪ್ರಾರಂಭವಾಗಿದ್ದು, ನಿತ್ಯ 10 ಸಾವಿರಕ್ಕೂ ಹೆಚ್ಚು ಜನರು ಕೆಲಸದಲ್ಲಿ ತೊಡಗಿದ್ದಾರೆ.

ಎನ್‌ಆರ್‌ಇಜಿಎ ಯೋಜನೆಯಡಿ ಮಹಿಳೆ, ಪುರುಷ ಎಂಬ ಭೇದವಿಲ್ಲದೆ ಎಲ್ಲರಿಗೂ ಸಮಾನ ಕೂಲಿ ಹಣ ನೀಡಲಾಗುತ್ತದೆ. 349 ರೂ. ಇದ್ದ ಕೂಲಿ ದರವನ್ನು ಎಪ್ರಿಲ್ 1ರಿಂದ 370 ರೂ.ಗೆ ಹೆಚ್ಚಿಸಲಾಗಿದೆ. ತಾಲೂಕಿನ ಗ್ರಾಮೀಣ ಜನರು ಬೇಸಿಗೆಯ ಕನಿಷ್ಠ 50 ದಿನಗಳ ಕಾಲ ಕೆಲಸ ನಿರ್ವಹಿಸಿದರೆ 18500 ರೂ ಹಣ ನೇರವಾಗಿ ಕೂಲಿಕಾರರ ಉಳಿತಾಯ ಖಾತೆಗೆ ಪಾವತಿಯಾಗಲಿದೆ. ತಮ್ಮದೇ ಕುಟುಂಬ ಸದಸ್ಯರು ಕೂಡಿಕೊಂಡು ಕೆಲಸ ಮಾಡಿ ಹಣ ಪಡೆಯಬಹುದಾಗಿದೆ. ಈ ಹಣವನ್ನು ಕುಟುಂಬದ ಸಣ್ಣ-ಪುಟ್ಟ ಅಗತ್ಯತೆ, ಮಕ್ಕಳ ಮುಂದಿನ ವ್ಯಾಸಂಗಕ್ಕೆ ಬಳಕೆ ಮಾಡಿಕೊಳ್ಳಬಹುದಾಗಿದೆ. ಜೊತೆಗೆ ಮುಂಗಾರು ಬೆಳೆ ಬೆಳೆಯಲು ಗೊಬ್ಬರ, ಬೀಜ ಮತ್ತು ಜಮೀನಿನ ಇನ್ನಿತರ ಕೆಲಸ ಕಾರ್ಯಗಳಿಗೆ ಇದನ್ನು ಬಳಕೆ ಮಾಡಿಕೊಳ್ಳಬಹುದಾಗಿದೆ.

ತಾಲೂಕಿನ ಗ್ರಾಮೀಣ ಜನರಿಗೆ ಅವರ ಗ್ರಾಮದಲ್ಲಿಯೇ ಉದ್ಯೋಗ ನೀಡಲು ಮನರೇಗಾ ಯೋಜನೆಯಡಿ ಕೆಲಸ ನೀಡಲು ಸಮುದಾಯ ಬದು ನಿರ್ಮಾಣ ಕಾಮಗಾರಿ ಆರಂಭಿಸಲಾಗಿದೆ. ಇದರಿಂದ ಗ್ರಾಮೀಣರು ಉದ್ಯೋಗ ಅರಿಸಿ ವಲಸೆ ಹೋಗುವುದನ್ನು ನಿಲ್ಲಿಸಿ ತಮ್ಮ ಗ್ರಾಮದಲ್ಲಿಯೇ ಉದ್ಯೋಗ ಖಾತ್ರಿಯಲ್ಲಿ ಕೆಲಸ ಪಡೆಯಬಹುದಾಗಿದೆ.

> ಜಮೀನಿನಲ್ಲಿ ಬದು ನಿರ್ಮಾಣ ಮಾಡಿಕೊಳ್ಳುವುದರಿಂದ ಮಳೆಗಾಲದಲ್ಲಿ ಆಗುವ ಅನುಕೂಲಗಳ ಕುರಿತು ರೈತರಿಗೆ ಮಾಹಿತಿ ನೀಡಲಾಗಿದೆ. ಮಣ್ಣು ಮತ್ತು ನೀರು ಸಂರಕ್ಷಣೆಗೆ ಬದು ನಿರ್ಮಾಣ ಉತ್ತಮ ಯೋಜನೆಯಾಗಿದೆ. ಇದರಿಂದ ರೈತರ ಜಮೀನಿನ ಫಲವತ್ತತೆ ಹೆಚ್ಚಳವಾಗುವುದರ ಜೊತೆಗೆ ಸಣ್ಣ, ಅತಿ ಸಣ್ಣ ರೈತರು ದಿನಕ್ಕೆ 370 ರೂ. ಕೂಲಿ ಪಡೆಯಬಹುದಾಗಿದೆ. ರೈತರು ತಮ್ಮ ಜಮೀನನಲ್ಲಿ ಬದು ನಿರ್ಮಿಸಿಕೊಳ್ಳಲು ಮುಂದಾಗಬೇಕು.
>
> – ಮಲ್ಲಯ್ಯ ಕೊರವನವರ.
> ಕಾರ್ಯನಿರ್ವಾಹ ಅಧಿಕಾರಿ,
> ತಾ.ಪಂ ಗದಗ.

### ನರೇಗಾ ಕಾಮಗಾರಿ ಸ್ಥಳದಲ್ಲಿ ಕಾಶ್ಮೀರದಲ್ಲಿ ಉಗ್ರರ ಗುಂಡಿಗೆ ಬಲಿಯಾದವರಿಗೆ ಸಂತಾಪ

# ನರೇಗಾ ಕಾರ್ಮಿಕರಿಂದ ಉಗ್ರರಿಗೆ ಹಿಡಿಶಾಪ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ



ಕಾಶ್ಮೀರದ ಪೆಹಲ್ಗಾಮ್‌ದಲ್ಲಿ ಉಗ್ರರ ಗುಂಡಿಗೆ ಮೃತಪಟ್ಟ ಕನ್ನಡಿಗರಾದ ಮಂಜುನಾಥ ರಾವ್, ಭರತ್ ಭೂಷಣ್, ಮಧುಸೂದನ್ ಹಾಗೂ ಇನ್ನಿತರರಿಗೆ ಗಜೇಂದ್ರಗಡ ತಾಲೂಕಿನ ಗುಳಗುಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಿರೇಳಗುಂಡಿ ಗ್ರಾಮದ ನರೇಗಾ ಸಮುದಾಯ ಕಾಮಗಾರಿ ಸ್ಥಳದಲ್ಲಿ ನರೇಗಾ ಕೂಲಿಕಾರ್ಮಿಕರು ಒಂದು ನಿಮಿಷಗಳ ಮೌನಾಚರಣೆ ಮಾಡುವ ಮೂಲಕ ಸಂತಾಪ ಸೂಚಿಸಿದರು.

ಮೌನಾಚರಣೆಗೂ ಮುನ್ನ ನರೇಗಾ ಕೂಲಿಕಾರ್ಮಿಕರನ್ನು ಉದ್ದೇಶಿಸಿ ಮಾತನಾಡಿದ ಕೂಲಿಕಾರ್ಮಿಕ ವಿರೇಶ ಒಲೇಕಾರ, ಕಾಶ್ಮೀರದಲ್ಲಿ ಹಿಂದೂಗಳನ್ನು ಗುರಿಯಾಗಿಸಿಕೊಂಡು ಉಗ್ರರು ಗುಂಡು ಹಾರಿಸಿ ಅಮಾಯಕರನ್ನು ಹತ್ಯೆ ಮಾಡಿದ್ದಾರೆ. ಇದೊಂದು ಹೇಯ ಕೃತ್ಯವಾಗಿದ್ದು, ಇದನ್ನು ನಾವೆಲ್ಲ ಖಂಡಿಸುತ್ತೇವೆ. ಇಂತಹ ದುಷ್ಕೃತ್ಯ ಎಸಗಿದವರನ್ನು ದೇವರು ಎಂದಿಗೂ ಕ್ಷಮಿಸಲಾರ. ಅಮಾಯಕರನ್ನು ಬಲಿಪಡೆದ ಉಗ್ರರನ್ನು ಮತ್ತು ಅವರ ಹಿಂದೆ ಇರುವವರನ್ನು ನಮ್ಮ ದೇಶದ ಸೈನಿಕರು ಬಲಿಪಡೆದುಕೊಳ್ಳಬೇಕು. ಉಗ್ರರು ಬಲಿಯಾಗದ ಹೊರತು ಮೃತಪಟ್ಟ ಕುಟುಂಬಸ್ಥರಿಗೆ ಸಮಾಧಾನವಾಗಲಾರದು. ಪ್ರಧಾನಿ ಮೋದಿ ಮತ್ತು ಕೇಂದ್ರ ಗೃಹ ಸಚಿವರಾದ ಅಮಿತ್ ಶಾ ಅವರು ಭಯೋತ್ಪಾದನೆ ನಿಗ್ರಹಕ್ಕೆ ದಿಟ್ಟ ಕ್ರಮ ಕೈಗೊಳ್ಳಲಿ ಎಂದರು.

> ಗ್ರಾ.ಪಂ ಸದಸ್ಯರಾದ ನೀಲವ್ವ ಕುರ್ತಕೋಟಿ ಮಾತನಾಡಿ, ಕೈಲಾಗದ ಹೇಡಿಗಳು ಅಮಾಯಕರನ್ನು ಬಲಿ ಪಡೆದಿದ್ದಾರೆ. ಪಾಕಿಸ್ತಾನದ ಕುತಂತ್ರ ಬುದ್ಧಿ ಏನೆಂಬುದು ಪೆಹಲ್ಗಾಮ್ ಘಟನೆ ಮೂಲಕ ಗೊತ್ತಾಗಿದೆ. ದೇಶದ ಪ್ರತಿಯೊಬ್ಬ ನಾಗರಿಕನು ಇದನ್ನು ಖಂಡಿಸುವಂತಾಗಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷರಾದ ಬಸವರಾಜ ಆದಿ, ಸದಸ್ಯ ನಾಗರಾಜ ಪಾಟೀಲ್, ನರೇಗಾ ಸಿಬ್ಬಂದಿವರ್ಗ, ಗ್ರಾಮ ಕಾಯಕ ಮಿತ್ರ ಮಲ್ಲಮ್ಮ ಮಣ್ಣೂರ, ಗುಳಗುಳಿ ಗ್ರಾ.ಪಂ ಸಿಬ್ಬಂದಿಗಳಾದ ಮಲ್ಲಪ್ಪ ಉಪ್ಪಾರ, ಯಮನೂರ ಓಲೇಕಾರ, ನಿಂಗರಾಜ ಗುರಿಕಾರ, ಮರಲಿಂಗಪ್ಪ ಮುತಾರಿ, ನರೇಗಾ ಕೂಲಿಕಾರ್ಮಿಕರಾದ ಶರಣು ನಾಯಕ, ಭೀಮಪ್ಪ ಶಾಂತಗಿರಿ, ಲಕ್ಷ್ಮೀ ಸುಳ್ಳದ, ಯಶೋದಾ ಲಾಲಗುಂದಿ, ಕಾಳಿಂಗ ಕುಂಕದ, ಮಂಜು ಕಣಕಿ, ಮೌನೇಶ ಬಡಿಗೇರ, ಶಿವಪ್ಪ ಕುಂಕದ, ಶಿವಪ್ಪ ಲಾಲಗುಂದಿ, ಈರಮ್ಮ ವಸ್ತ್ರದ, ಶಾರವ್ವ ಓಲೇಕಾರ, ಕಸ್ತೂರೆವ್ವ ಲಾಲಗುಂದಿ ಸೇರಿದಂತೆ 400ಕ್ಕೂ ಅಧಿಕ ನರೇಗಾ ಕೂಲಿಕಾರ್ಮಿಕರು ಹಾಜರಿದ್ದರು.

# ಶಿಕ್ಷಣದ ಕುರಿತು ಅರಿವು ಚಟುವಟಿಕೆ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಪ್ರತಿಷ್ಠಿತ ಕೆ.ಎಲ್.ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಲಯದ ಎನ್. ಎಸ್. ಎಸ್. ಘಟಕದ ವತಿಯಿಂದ ಗುರುವಾರ ಗದಗ ನಗರದ ಎಸ್.ಎಮ್. ಕೃಷ್ಣಾ ನಗರದಲ್ಲಿ ಶಿಕ್ಷಣದ ಬಗ್ಗೆ ಅರಿವು ಚಟುವಟಿಕೆಯನ್ನು ಹಮ್ಮಿಕೊಳ್ಳಲಾಗಿತ್ತು.

ಈ ಚಟುವಟಿಕೆಯ ಮೂಲಕ ಜನರಲ್ಲಿ ಶಿಕ್ಷಣದ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯವನ್ನು ಮಾಡಿದರು. ಎನ್.ಎಸ್.ಎಸ್ ಸ್ವಯಂಸೇವಕರು ಸಾರ್ವಜನಿಕರ ಮನೆ ಮನೆಗೂ ಹೋಗಿ ಶಿಕ್ಷಣ ಎಂದರೆ ಏನು, ಶಿಕ್ಷಣದ ಮಹತ್ವ, ಶಿಕ್ಷಣ ಯಾಕೆ ಬೇಕು, ಶಿಕ್ಷಣದ ಶಕ್ತಿ, ಶಿಕ್ಷಣದಿಂದ ವ್ಯಕ್ತಿಯ ಬದಲಾವಣೆ, ಬೆಳೆವಣಿಗೆ ಇತ್ಯಾದಿ ಅರಿವನ್ನು ಸಾರ್ವಜನಿಕರಿಗೆ ತಲುಪಿಸಿದರು.

ಈ ಚಟುವಟಿಕೆಯಲ್ಲಿ ಮಹಾವಿದ್ಯಾಲಯದ ಎನ್.ಎಸ್.ಎಸ್ ಘಟಕದ ನಾಯಕಿ ಸಾಕ್ಷಿ ಹೊಸಮಠ, ಎನ್.ಎಸ್.ಎಸ್ ಘಟಕದ 1ನೇ ತಂಡದ ನಾಯಕ ಮೌಲಾಲಿ ನದಾಫ, ನಾಯಕಿ ಪೂಜಾ ಬಂಡಿ ಮತ್ತು ಇನ್ನುಳಿದ ತಂಡಗಳ ನಾಯಕರುಗಳಾದ ಮೇಘಾ ಮುದ್ದಿ, ಪೂಜಾ ಮರಿಬಸಣ್ಣನವರ, ಆಕಾಶ ಕಳಗಣ್ಣನವರ, ನೀಲಮ್ಮ ಸಿತಾರಳ್ಳಿ ಹಾಗೂ ಎನ್.ಎಸ್.ಎಸ್ ಘಟಕದ ಸ್ವಯಂಸೇವಕರು ಉಪಸ್ಥಿತರಿದ್ದರು.

# ಬಸವ ಜಯಂತಿ ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಜಗದ್ಗುರು ತೋಂಟದಾರ್ಯ ಮಠದ ಆವರಣದಲ್ಲಿರುವ ಅನುಭವ ಮಂಟಪದಲ್ಲಿ ಎಪ್ರಿಲ್ 25ರ ಸಂಜೆ 6 ಗಂಟೆಗೆ ಎಪ್ರಿಲ್ 30ರಂದು ಆಚರಿಸಲಾಗುವ ಬಸವ ಜಯಂತಿಯ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ಸಭೆಯ ಅಧ್ಯಕ್ಷತೆಯನ್ನು ಪ್ರೊ. ಶಿವಾನಂದ ಎಸ್.ಪಟ್ಟಣಶೆಟ್ಟರ ವಹಿಸುವರು.

ಜಗದ್ಗುರು ಶ್ರೀ ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ-2025, ಲಿಂಗಾಯತ ಪ್ರಗತಿಶೀಲ ಸಂಘ ಗದಗ, ಬಸವದಳ, ಬಸವ ಕೇಂದ್ರ, ಶರಣ ಸಾಹಿತ್ಯ ಪರಿಷತ್ತು, ಜಾಗತಿಕ ಲಿಂಗಾಯತ ಮಹಾಸಭಾ, ಬಸವ ಯೋಗ ಕೇಂದ್ರ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ, ಕದಳಿ ಮಹಿಳಾ ವೇದಿಕೆ, ದಲಿತ ಸಂಘರ್ಷ ಸಮಿತಿ, ದಲಿತ ಕಲಾ ಬಳಗ, ಬಸವಾದಿ ಶಿವಶರಣರ ಸಂಘಟನೆಗಳಾದ ಶರಣ ಮಾದರ ಚೆನ್ನಯ್ಯ, ಡೋಹರ ಕಕ್ಕಯ್ಯ, ಮಡಿವಾಳ ಮಾಚಯ್ಯ, ಹಡಪದ ಅಪ್ಪಣ್ಣ, ಮೇದಾರ ಕೇತಯ್ಯ, ಕುಂಬಾರ ಗುಂಡಯ್ಯ, ಕುರುಬ ಗೊಲ್ಲಾಳ, ಜೇಡರ ದಾಸಿಮಯ್ಯ, ಹೂಗಾರ ಮಾದಯ್ಯ, ಶಿವಯೋಗಿ ಸಿದ್ಧರಾಮಯ್ಯ, ಒಕ್ಕಲಿಗ ಮುದ್ದಣ್ಣ, ಗಾಣದ ಕಣ್ಣಪ್ಪ, ಬಡಿಗಾರ ಬಾಚಿಕಾಯಕದ ಬಸಪ್ಪ ಮುಂತಾದ ಬಸವಪರ ಸಂಘಟನೆಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸಭೆಗೆ ಆಗಮಿಸಿ ತಮ್ಮ ಅಮೂಲ್ಯವಾದ ಸಲಹೆ-ಸೂಚನೆಗಳನ್ನು ನೀಡುವ ಮೂಲಕ ಬಸವ ಜಯಂತಿ ಯಶಸ್ವಿಗೊಳಿಸೋಣ ಎಂದು ಸಂಘಟಿಕರ ಪರವಾಗಿ ಡಾ. ಧನೇಶ ದೇಸಾಯಿ, ಬಾಲಚಂದ್ರ ಭರಮಗೌಡ್ರ, ಕೆ.ಎಸ್. ಚೆಟ್ಟಿ, ವಿ.ಕೆ. ಕರೇಗೌಡ್ರ, ಶೇಖಣ್ಣ ಕವಳಿಕಾಯಿ, ಪ್ರಕಾಶ ಅಸುಂಡಿ ವಿನಂತಿಸಿದ್ದಾರೆ.

# ದಾವಣಗೆರೆಯಲ್ಲಿ ನಾಳೆ ರಾಜ್ಯದ ಎಲ್ಲಾ ಹೋರಾಟಗಾರರ ದಂಡು: ಕೆ.ಎಲ್ ಅಶೋಕ್



■ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಏ.26ರಂದು ನಡೆಯಲಿರುವ ಸಂವಿಧಾನ ಸಂರಕ್ಷಕರ ಸಮಾವೇಶದ ಎಲ್ಲಾ ಸಿದ್ಧತೆಗಳು ಪೂರ್ಣಗೊಂಡಿವೆ. ಅಂದು ದಾವಣಗೆರೆಯಲ್ಲಿ ನಾಡಿನ ಎಲ್ಲಾ ಹೋರಾಟಗಾರರ ದಂಡು ಅಣಿನೆರೆಯಲಿದ್ದು, ನಗರವು ದೇಶದ ಇತಿಹಾಸದಲ್ಲಿ ಅಚ್ಚಳಿಯದೆ ಉಳಿಯುವಂತಹ ಕಾರ್ಯಕ್ರಮವೊಂದಕ್ಕೆ ಸಾಕ್ಷಿಯಾಗಲಿದೆ. ಅಂದಿನ ಸಂವಿಧಾನ ಸಂರಕ್ಷಕರ ಸಮಾವೇಶದ ಬಹಿರಂಗ ಸಭೆಯನ್ನು ನಾಡೋಜ ಬರಗೂರು ರಾಮಚಂದ್ರಪ್ಪನವರು ಉದ್ಘಾಟಿಸಲಿದ್ದಾರೆ ಎಂದು ಸಮಾವೇಶದ ಕೇಂದ್ರ ಸಂಚಾಲಕ ಕೆ.ಎಲ್.ಅಶೋಕ್ ತಿಳಿಸಿದ್ದಾರೆ.

ನಗರದಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕಾರ್ಯಕ್ರಮದಲ್ಲಿ ಪ್ರಸಿದ್ಧ ಚಿತ್ರ ನಟ ಪ್ರಕಾಶ್ ರಾಜ್, ಗುಜರಾತಿನ ಶಾಸಕ ಹಾಗೂಹೋರಾಟಗಾರ ಜಿಗ್ನೇಶ್ ಮೇವಾನಿ, ಪ್ರಖರ ಚಿಂತಕರಾದ ಪರಕಾಲ ಪ್ರಭಾಕರ್, ಮುಸ್ಲಿಂ ಸಮುದಾಯದ ರಾಷ್ಟ್ರೀಯ ನಾಯಕರಾದ ಮೊಹಮ್ಮದ್ ಸಲೀಂ, ಸಂಯುಕ್ತ ಕಿಸಾನ್ ಮೋರ್ಚಾದ ಡಾ.ಸುನೀಲಮ್, ಚಲನಚಿತ್ರ ನಿರ್ದೇಶಕಿ ಕವಿತಾ ಲಂಕೇಶ್, ಮಾಜಿ ಸಚಿವೆ ಬಿ.ಟಿ.ಲಲಿತಾ ನಾಯ್ಕ್, ಶೋಷಿತ ಸಮುದಾಯಗಳ ಒಕ್ಕೂಟದ ಪ್ರಧಾನ ಸಂಚಾಲಕರಾದ ಕೆ.ಎಂ. ರಾಮಚಂದ್ರಪ್ಪ, ರೈತ ಚಳವಳಿಯ ಮುಂದಾಳುಗಳಾದ ಹೆಚ್. ಆರ್.ಬಸವರಾಜಪ್ಪ, ಬಡಗಲಪುರ ನಾಗೇಂದ್ರ, ದಲಿತ ಚಳವಳಿಯ ಹಿರಿಯ ಮುಖಂಡರಾದ ಗುರುಪ್ರಸಾದ್ ಕೆರಗೋಡು, ಎನ್.ವೆಂಕಟೇಶ್, ಮಾವಳ್ಳಿ ಶಂಕರ್, ವಿ.ನಾಗರಾಜ್, ಕ್ರೈಸ್ತ ಸಮುದಾಯದ ಮುಖಂಡರಾದ ಫಾ.ವೀರೇಸ್ ಮೋರೆಸ್, ಫಾ. ಜೆರಾಲ್ಡ್, ಮಾನವ ಬಂಧುತ್ವ ವೇದಿಕೆಯ ಎ.ಬಿ.ರಾಮಚಂದ್ರಪ್ಪ, ರವಿ ನಾಯ್ಕರ್, ಜನಪರ ಚಿಂತಕ-ಹೋರಾಟಗಾರ ಪಾಟೀಲ್ ಇನ್ನು ಮುಂತಾದ ಅನೇಕ ಗಣ್ಯರು ಭಾಗವಹಿಸುತ್ತಿದ್ದಾರೆ ಎಂದರು.

# ಭಯೋತ್ಪಾದಕ ಕೃತ್ಯ ಅಕ್ಷಮ್ಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾಶ್ಮೀರದ ಪಹಲ್ಗಾಮ್‌ದಲ್ಲಿನ ಉಗ್ರರ ಅಟ್ಟಹಾಸ ಖಂಡಿಸಿ ಗುರುವಾರ ಪಟ್ಟಣದ ಅಂಜುಮನ್ ಇಸ್ಲಾಂ ಕಮಿಟಿ ವತಿಯಿಂದ ತಹಸೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ಪಟ್ಟಣದ ಬೈಸರನ್ ಪ್ರವಾಸಿ ತಾಣದಲ್ಲಿ ಭಯೋತ್ಪಾದಕರು ಕೋಮುವಾದಿ ಮನಸ್ಥಿತಿಯಿಂದ ಮುಗ್ಧ ನಾಗರಿಕರ ಮೇಲೆ ನಡೆಸಿದ ಈ ದಾಳಿಯನ್ನು ತೀವ್ರವಾಗಿ ಖಂಡಿಸುತ್ತೇವೆ. ಉಗ್ರರು ಅಮಾಯಕರ ಮೇಲೆ ನಡೆಸಿದ ಈ ಕೃತ್ಯ ಅಕ್ಷಮ್ಯವಾಗಿದೆ. ಎಲ್ಲಾ ಧರ್ಮಗಳ ಸಾರ 'ಪ್ರೀತಿ' ಮತ್ತು 'ಅಹಿಂಸೆ'. ಪ್ರೀತಿಯಿಂದ ಸಾಧಿಸಲಾಗದ್ದನ್ನು ಹಿಂಸೆ-ದ್ವೇಷದಿಂದ ಸಾಧಿಸಲಾಗದು. ಕಾಶ್ಮೀರದ ಭಯೋತ್ಪಾದನೆಯನ್ನು ಸಂಪೂರ್ಣ ನಿರ್ಮೂಲನೆ ಮಾಡಲು ಮುಸ್ಲಿಂ ಸಮಾಜದಿಂದ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸುತ್ತೇವೆ ಎಂದು ಮನವಿಯಲ್ಲಿ ತಿಳಿಸಿದರು.

ದೇಶದ ಏಕತೆ ಹಾಗೂ ಸಮಗ್ರತೆಗೆ ಎಲ್ಲ ಧರ್ಮದವರು ಒಂದಾಗಬೇಕು. ಭಾರತ ದೇಶ ಶಾಂತಿ ಪ್ರಿಯ ದೇಶ. ನಾವೆಲ್ಲರೂ ಸಹಬಾಳ್ವೆ-ಸಾಮರಸ್ಯದಿಂದ ಬಾಳುತ್ತಿದ್ದೇವೆ. ಸರ್ಕಾರಗಳು ಉಗ್ರರ ಅಟ್ಟಹಾಸ ಮಟ್ಟ ಹಾಕಲು ಕಠಿಣ ಕ್ರಮಗಳನ್ನು ಕೈಗೊಂಡು ಪ್ರವಾಸಿ ತಾಣಗಳನ್ನು, ಸಾರ್ವಜನಿಕರು ರಕ್ಷಿಸಲು ಸರ್ವಧರ್ಮೀಯರನ್ನು ವಿನಂತಿ ಮಾಡಿದರು.

ಈ ವೇಳೆ ಅಂಜುಮನ್ ಕಮಿಟಿ ಅಧ್ಯಕ್ಷ ಎಂ.ಎಂ ಗದಗ, ದೂದಪೀರಾಂ ದರ್ಗಾ ಕಮೀಟಿ ಅಧ್ಯಕ್ಷ ಸುಲೆಮಾನಸಾಬ ಕಣಿಕೆ, ಪುರಸಭೆ ಉಪಾಧ್ಯಕ್ಷ ಫಿರ್ದೋಸ್ ಆಡೂರ, ಎಸ್. ಕೆ. ಹವಾಲ್ದಾರ, ಮುಸ್ತಾಕಹ್ಮದ ಶಿರಹಟ್ಟಿ, ಇಸ್ಮಾಯಿಲ್ ಆಡೂರ, ಕಲಂದರ ಸೂರಣಗಿ, ದಾದಾಪೀರ ತಂಬಾಕದ, ಭಾಷಾ ಶಿರಹಟ್ಟಿ ಸೇರಿ ಮುಸ್ಲಿಂ ಸಮುದಾಯದ ಮುಖಂಡರು, ಯುವರಕು ಇದ್ದರು. ತಹಸೀಲ್ದಾರ ವಾಸುದೇವ ಸ್ವಾಮಿ ಮನವಿ ಸ್ವೀಕರಿಸಿದರು.

# ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಪುರಸಭೆಯ 15ನೇ ಹಣಕಾಸಿನ 76 ಲಕ್ಷ ರೂ ಅನುದಾನಲ್ಲಿ ಪಟ್ಟಣದ ಮುಖ್ಯ ಬಜಾರ್ ರಸ್ತೆಯ ಗ್ರಾಮ ಚಾವಡಿಯಿಂದ ಭರಮದೇವರ ಸರ್ಕಲ್‌ವರೆಗಿನ 260 ಮೀಟರ್ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಡಾ. ಚಂದ್ರು ಲಮಾಣಿ ಗುರುವಾರ ಭೂಮಿಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, ವ್ಯವಹಾರಿಕ, ಶೈಕ್ಷಣಿಕವಾಗಿ ತೀವ್ರಗತಿಯಲ್ಲಿ ಅಭಿವೃದ್ಧಿ ಹೊಂದುತ್ತಿರುವ ಪಟ್ಟಣದಲ್ಲಿನ ರಸ್ತೆಗಳು ಸಾಕಷ್ಟು ಹದಗಟ್ಟಿವೆ. ಇವುಗಳ ಅಭಿವೃದ್ಧಿಗೆ ವಿಶೇಷ ಅನುದಾನದ ಅಗತ್ಯವಿದೆ. ಮುಖ್ಯ ಬಜಾರ್ ರಸ್ತೆ ಶಿಗ್ಲಿ ನಾಕಾದಿಂದ ಗ್ರಾಮ ಚಾವಡಿವರೆಗೆ ಮಾತ್ರ ಅಭಿವೃದ್ಧಿ ಹೊಂದಿ ದೂದಪೀರಾಂ ದರ್ಗಾವರೆಗೆ ಹದಗೆಟ್ಟಿತ್ತು. ಇದರಿಂದ ಹಳ್ಳಿಗಳಿಂದ ಬಜಾರ-ಕ್ಕೆ ಬರುವ ಸಾರ್ವಜನಿಕರಿಗೆ ಹಾಗೂ ದೂದನಾನಾ ದರ್ಗಾ-ಕ್ಕೆ ಬರುವ ಭಕ್ತರ ಸಂಚಾರಕ್ಕೆ ಸಾಕಷ್ಟು ತೊಂದರೆಯಾಗಿತ್ತು. ಕೆಂಚಲಾಪುರ ಓಣಿಯವರೆಗೆ ರಸ್ತೆ ಅಭಿವೃದ್ಧಿಯನ್ನು ಅಲ್ಪಸಂಖ್ಯಾತರ ಇಲಾಖೆಯಿಂದ ಬಂದ 2 ಕೋಟಿ ರೂ ಅನುದಾನದಲ್ಲಿ ಆದಷ್ಟು ಬೇಗ ಪ್ರಾರಂಭಿಸಲಾಗುವುದು ಎಂದರು.

ಈ ವೇಳೆ ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಉಪಾಧ್ಯಕ್ಷ ಫಿರ್ದೋಶ್ ಆಡೂರ, ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ, ಸದಸ್ಯರಾದ ಪ್ರವೀಣ ಬಾಳಿಕಾಯಿ, ರಾಜೀವ ಕುಂಬಿ, ಬಸವರಾಜ ಓದುನವರ, ರಮೇಶ ಗಡದವರ, ಮಹಾದೇವಪ್ಪ ಅಣ್ಣಿಗೇರಿ, ರಮೇಶ ಗಡದವರ, ಜಯಕ್ಕ ಕಳ್ಳಿ, ಅಶ್ವಿನಿ ಅಂಕಲಕೋಟಿ, ವಾಣಿ ಹತ್ತಿ, ಕಿರಣ ನವಲೆ, ಎಸ್.ಕೆ. ಹವಾಲ್ದಾರ, ಎಂ.ಆರ್. ಪಾಟೀಲ, ಅನಿಲ ಮುಳುಗುಂದ, ಫಕ್ಕೀರೇಶ ನಂದೆಣ್ಣವರ, ಅಮರೀಶ ತೆಂಬದಮನಿ, ಗಿರೀಶ ಚೌರಡ್ಡಿ, ಪ್ರಕಾಶ ಮಾದನೂರ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಅರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಇಂಜಿನಿಯರ್ ವೀರೇಂದ್ರಸಿಂಗ್ ಕಾಟೆವಾಲೆ, ಹನುಮಂತಪ್ಪ ನಂದೆಣ್ಣವರ ಸೇರಿ ಅನೇಕರಿದ್ದರು.

# ದಂಡರಹಿತ ಪರೀಕ್ಷಾ ಶುಲ್ಕ ಪಾವತಿಗೆ ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ನರಸಾಪೂರದಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಸಿ-03, ಸಿ-09 ಮತ್ತು ಸಿ-15 ಪಠ್ಯಕ್ರಮದಲ್ಲಿ ಪ್ರಥಮ/ಲ್ಯಾಟರಲ್ ಎಂಟ್ರಿ ಮುಖಾಂತರ ತೃತೀಯ ಸೆಮಿಸ್ಟರ್‌ಗೆ ಪ್ರವೇಶ ಪಡೆದು 09/06 ವರ್ಷಗಳ ಕಾಲಾವಧಿ ಮೀರಿರುವ ಎಲ್ಲ ವಿದ್ಯಾರ್ಥಿಗಳಿಗೆ ಎಪ್ರಿಲ್/ಮೇ-2025 ಪರೀಕ್ಷೆಗೆ ಹಾಜರಾಗಲು ಸರ್ಕಾರವು ಅನುಮತಿ ನೀಡಿ ಆದೇಶಿಸಿದೆ.

ಸರ್ಕಾರದ ಅನುಮತಿಯ ಹಿನ್ನೆಲೆಯಲ್ಲಿ ಸದರಿ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುವಂತೆ ದಂಡರಹಿತವಾಗಿ ನಿಗದಿತ ಪರೀಕ್ಷಾ ಶುಲ್ಕ ಪಾವತಿಸಿ ಎಪ್ರಿಲ್/ಮೇ-2025ರ ಪರೀಕ್ಷೆಗೆ ನೋಂದಾಯಿಸಿಕೊಳ್ಳಲು 26-04-2025ರವರೆಗೆ ಇಲಾಖೆಯು ಕಾಲಾವಕಾಶ ನೀಡಿದೆ.

ನಂತರ ಯಾವುದೇ ಕಾರಣಕ್ಕೂ ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕ ವಿಸ್ತರಿಸಲಾಗುವುದಿಲ್ಲವೆಂದು ಸ್ಪಷ್ಟಪಡಿಸಲಾಗಿದೆ.

ಸಂಬಂಧಪಟ್ಟ ವಿದ್ಯಾರ್ಥಿಗಳು ಪರೀಕ್ಷೆಗೆ ನಿಯಮಾನುಸಾರ ಪರೀಕ್ಷಾ ಶುಲ್ಕವನ್ನು ನಿಗದಿತ ದಿನಾಂಕದೊಳಗಾಗಿ ಪಾವತಿಸಿ ಪರೀಕ್ಷೆಗೆ ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಯನ್ನು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಕಛೇರಿ ಅವಧಿಯಲ್ಲಿ ಪಡೆಯಬಹುದಾಗಿದೆ ಎಂದು ಪಾಚಾರ್ಯ ಬರಮಪ್ಪ ಬಡಪ್ಪವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka